ಸಂಪುಟ : 11 ಸಂಚಿಕೆ: 11 ಪುಟ : 4+2 ಬೆಲೆ: 3.00 ಶುಕ್ರವಾರ ಫೆಬ್ರವರಿ 06 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 11 Pages : 4+2 Price : 3.00 Friday February 06 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ದಿ. ಕೆ.ಎಚ್. ಪಾಟೀಲ ಸಂಸ್ಮರಣೆ ಫೆ. 9ಕ್ಕೆ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ದಿ.ಗದಗ ಕೋ-ಆಪ್ ಕಾಟನ್ ಸೇಲ್ ಸೋಸೈಟಿಯ ಆವರಣದಲ್ಲಿರುವ ಸಹಕಾರಿ ರಂಗದ ಭೀಷ್ಮ ದಿ. ಕೆ.ಎಚ್. ಪಾಟೀಲರ ಪುತ್ಥಳಿಯ ಎದುರು ದಿ. ಕೆ.ಎಚ್. ಪಾಟೀಲರ ಪುಣ್ಯತಿಥಿಯ ಕಾರ್ಯಕ್ರಮದ ಅಂಗವಾಗಿ ಪ್ರಾರ್ಥನಾ ಸಭೆಯನ್ನು ಫೆ. 9ರಂದು ಬೆಳಿಗ್ಗೆ 9ಕ್ಕೆ ಆಯೋಜಿಸಲಾಗಿದ್ದು, ಅವರ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಕಾರ್ಯಕ್ರಮದ ಸಂಘಟಕರು ಪ್ರಕಟಣೆಯ ಮೂಲಕ ವಿನಂತಿಸಿದ್ದಾರೆ.

## ನಾಳೆ ಪೂರ್ವಭಾವಿ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ ಪ್ರತಿ ವರ್ಷದಂತೆ ಈ ವರ್ಷವೂ ಫೆಬ್ರವರಿ 19 ರಂದು ಆಚರಿಸಲಾಗುವ ಛತ್ರಪತಿ ಶಿವಾಜಿ ಮಹಾರಾಜ ಜಯಂತಿ ನಿಮಿತ್ತ ಫೆಬ್ರವರಿ 07 ರಂದು ಶನಿವಾರ ಮುಂಜಾನೆ 11:00 ಗಂಟೆಗೆ ಹಾಗೂ ಫೆಬ್ರುವರಿ 20 ರಂದು ಆಚರಿಸಲಾಗುವ ಶ್ರೀ ಸಂತ ಕವಿ ಸರ್ವಜ್ಞ ಜಯಂತಿ ನಿಮಿತ್ತ ಮುಂಜಾನೆ 11.30 ಗಂಟೆಗೆ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಸವರಾಜ ವ್ಹಿ.ಬಳ್ಳಾರಿ ತಿಳಿಸಿದ್ದಾರೆ.

### ರಾಜ್ಯ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಎಸ್.ಆರ್. ಪಾಟೀಲರಿಂದ ಪ್ರಗತಿ ಪರಿಶೀಲನೆ

# ಗ್ಯಾರಂಟಿ ಯೋಜನೆಗಳ ಸೌಲಭ್ಯ ಕಟ್ಟ ಕಡೆಯ ವ್ಯಕ್ತಿಗೂ ಸಿಗಲಿ



■ ವಿಜಯಸಾಕ್ಷಿ ಸುದ್ದಿ, ಗದಗ

ಬಡಜನರನ್ನು ಆರ್ಥಿಕವಾಗಿ ಸಬಲರನ್ನಾಗಿಸಲು ಹಾಗೂ ಸ್ವಾವಲಂಬಿಯಾಗಿ ಜೀವನ ನಡೆಸಲು ಪಂಚ ಗ್ಯಾರಂಟಿ ಯೋಜನೆಗಳು ಸಹಕಾರಿಯಾಗಿದ್ದು, ಯೋಜನೆಯ ಸೌಲಭ್ಯ ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ಲಭಿಸಬೇಕು ಎಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಎಸ್. ಆರ್. ಪಾಟೀಲ ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗುರುವಾರ ನಡೆದ ಗದಗ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನವಾದ ನಂತರ ದೇಶದಲ್ಲೇ ಕರ್ನಾಟಕ ರಾಜ್ಯವು ತೆರಿಗೆ ಪಾವತಿಸುವುದರಲ್ಲಿ 2ನೇ ಸ್ಥಾನದಲ್ಲಿದೆ. ಸ್ತ್ರೀಯರನ್ನು ಆರ್ಥಿಕ ಸಬಲರನ್ನಾಗಿಸುವುದು ಗೃಹಲಕ್ಷ್ಮೀ ಯೋಜನೆಯ ಉದ್ದೇಶವಾಗಿದ್ದು, 1,23,00,000 ಮಹಿಳೆಯರು ಇದರ ಲಾಭ ಪಡೆಯುತ್ತಿದ್ದಾರೆ. ಈ ನಿಟ್ಟಿನಲ್ಲಿ ಸೌಲಭ್ಯದ ದುರುಪಯೋಗವಾಗದಂತೆ ಕ್ರಮ ವಹಿಸಲಾಗುತ್ತಿದೆ ಎಂದರು.

ಫೆಬ್ರವರಿ 18ರಂದು ಪಂಚ ಗ್ಯಾರಂಟಿ ಯೋಜನೆಗಳ ಗದಗ ಜಿಲ್ಲಾ ಮಟ್ಟದ ಸಮಾವೇಶ/ಉತ್ಸವ ಹಾಗೂ ಫಲಾನುಭವಿಗಳೊಂದಿಗೆ ಚರ್ಚೆ ಸಮಾರಂಭವು ಜರುಗಲಿದ್ದು, ಈ ಸಮಾವೇಶವನ್ನು ಅತ್ಯಂತ ವಿಜೃಂಭಣೆಯಿಂದ ಆಚರಿಸಲು ಉದ್ದೇಶಿಸಲಾಗಿದೆ. ಗ್ಯಾರಂಟಿ ಸಮಾವೇಶವು ಅತ್ಯಂತ ವ್ಯವಸ್ಥಿತವಾಗಿ ಹಾಗೂ ಸಂಭ್ರಮದಿಂದ ಜರುಗಲು ವಿವಿಧ ಸಮಿತಿಗಳನ್ನು ರಚಿಸಿ ಅಧಿಕಾರಿಗಳಿಗೆ ಕಾರ್ಯ ಹಂಚಿಕೆ ಮಾಡಬೇಕು. ಸಮಾವೇಶದಲ್ಲಿ ಐದೂ ಗ್ಯಾರಂಟಿ ಯೋಜನೆಗಳ ಪ್ರತ್ಯೇಕ ಮಳಿಗೆ (ಸ್ಟಾಲ್)ಗಳನ್ನು ಹಾಕಬೇಕು. ಶಿಷ್ಟಾಚಾರದನ್ವಯ ಆಮಂತ್ರಣ ಪತ್ರಿಕೆ, ▸▸ 2ನೇ ಪುಟಕ್ಕೆ

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಮಾತನಾಡಿ, ಗ್ಯಾರಂಟಿ ಯೋಜನೆಗಳ ಸೌಲಭ್ಯ ಒದಗಿಸುವುದು ಬಡಜನರ ಸೇವೆಗೆ ಸರ್ಕಾರವು ಒದಗಿಸಿಕೊಟ್ಟ ಅವಕಾಶವಾಗಿದೆ. ಸೌಲಭ್ಯಗಳ ದುರುಪಯೋಗವಾಗದಂತೆ ನಿಗಾ ವಹಿಸುವದು ಹಾಗೂ ಸೌಲಭ್ಯಗಳಿಂದ ಅರ್ಹ ಫಲಾನುಭವಿಗಳು ವಂಚಿತರಾಗದಂತೆ ಅಧಿಕಾರಿಗಳು ಕ್ರಮ ವಹಿಸಬೇಕೆಂದು ತಿಳಿಸಿದರು.

ಪ್ರಯಾಣಿಕರ ಆರೋಗ್ಯದ ಹಿತದೃಷ್ಟಿಯಿಂದ ಜಿಲ್ಲೆಯ ಬಸ್‌ಸ್ಟ್ಯಾಂಡ್‌ಗಳಲ್ಲಿ ಸ್ವಚ್ಛತೆ ಕಾಯ್ದುಕೊಳ್ಳಬೇಕು. ಬಸ್ ನಿಲ್ದಾಣಗಳಲ್ಲಿ ಮಹಿಳೆಯರಿಗೆ ಪ್ರತ್ಯೇಕ ಆಸನದ ವ್ಯವಸ್ಥೆ, ವಿಶ್ರಾಂತಿ ಗೃಹ ಹಾಗೂ ಶೌಚಾಲಯಗಳಿರುವಂತೆ ಕ್ರಮ ವಹಿಸಬೇಕು. ಜನರ ಸೇವೆಯೇ ಜನಾರ್ಧನ ಸೇವೆಯಾಗಿದ್ದು ಜನರ ಸಮಸ್ಯೆಗಳಿಗೆ ಸ್ಪಂದಿಸಿ ಸರ್ಕಾರದ ಕೆಲಸವನ್ನು ಆಸಕ್ತಿಯಿಂದ ಹಾಗೂ ಶ್ರದ್ಧೆಯಿಂದ ಅಧಿಕಾರಿಗಳು ನಿರ್ವಹಿಸಬೇಕು. ಪಡಿತರ ಅಂಗಡಿಗಳಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಬೋರ್ಡ್ ಪ್ರದರ್ಶಿಸಬೇಕು ಎಂದು ಎಸ್.ಆರ್. ಪಾಟೀಲ ತಿಳಿಸಿದರು.

### ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣಾ ಕಾರ್ಯಾಗಾರದಲ್ಲಿ ಡಾ. ಈಶ್ವರ ಉಳ್ಳಾಗಡ್ಡಿ

# ಮಕ್ಕಳ ವಿಷಯವಾರು ದೌರ್ಬಲ್ಯಗಳನ್ನು ವಿಶ್ಲೇಷಿಸಿ



■ ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳ ವಿಷಯವಾರು ದುರ್ಬಲತೆಗಳನ್ನು ವಿಶ್ಲೇಷಿಸಿ, ಗುರಿ ನಿರ್ದಿಷ್ಟ ಕಾರ್ಯ ಯೋಜನೆ ರೂಪಿಸಿ ಅನುಷ್ಠಾನಗೊಳಿಸುವಂತೆ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಅಪರ ಆಯುಕ್ತರಾದ ಡಾ. ಈಶ್ವರ ಉಳ್ಳಾಗಡ್ಡಿ ತಿಳಿಸಿದರು.

ಗುರುವಾರ ಗದಗ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಜಿಲ್ಲೆಯ ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆ ಕುರಿತು ಹಮ್ಮಿಕೊಂಡಿದ್ದ ಕಾಯಾಗಾರ ಹಾಗೂ ಗದಗ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಎಸ್‌ಎಸ್‌ಎಲ್‌ಸಿಯಲ್ಲಿ ಗುಣಾತ್ಮಕ ಫಲಿತಾಂಶ ತರುವ ಉದ್ದೇಶದಿಂದ ಈ ಕಾರ್ಯಾಗಾರ ನಡೆಸಲಾಗುತ್ತಿದೆ. ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶವನ್ನು ಶೇಕಡಾವಾರು ಹೆಚ್ಚಿಸುವುದು ಪ್ರತಿಯೊಬ್ಬ ಶಿಕ್ಷಕರ ಜವಾಬ್ದಾರಿಯಾಗಿದೆ. ವಿದ್ಯಾರ್ಥಿಗಳ ಕಲಿಕಾ ಮಟ್ಟವನ್ನು ಗುರುತಿಸಿ, ಹಿಂದುಳಿದ ವಿದ್ಯಾರ್ಥಿಗಳಿಗೆ ವಿಶೇಷ ತರಬೇತಿ ನೀಡಬೇಕು ಎಂದು ಸೂಚಿಸಿದರು.

ಶಾಲಾ ಮಟ್ಟದಲ್ಲಿ ನಿಯಮಿತ ಪರೀಕ್ಷೆಗಳು, ಮರುಪಠಣ ತರಗತಿಗಳು ಹಾಗೂ ಪೋಷಕರೊಂದಿಗೆ ಸಮನ್ವಯ ಸಭೆಗಳನ್ನು ನಡೆಸುವ ಮೂಲಕ ವಿದ್ಯಾರ್ಥಿಗಳ ಸಾಧನೆಯನ್ನು ಹೆಚ್ಚಿಸಬೇಕು. ಶಿಕ್ಷಕರು ಸಮಯ ಪಾಲನೆ, ಬದ್ಧತೆ ಮತ್ತು ಗುಣಮಟ್ಟದ ಬೋಧನೆಗೆ ಆದ್ಯತೆ ನೀಡಬೇಕು ಎಂದು ಅವರು ಒತ್ತಿ ಹೇಳಿದರು.

ಜಿಲ್ಲೆಯ ಪ್ರತಿಯೊಂದು ಶಾಲೆಯೂ ಫಲಿತಾಂಶ ಸುಧಾರಣೆಗೆ ಸಮಗ್ರ ಪ್ರಯತ್ನ ಕೈಗೊಳ್ಳಬೇಕು. ಶಿಕ್ಷಣ ಇಲಾಖೆಯ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ, ವಿದ್ಯಾರ್ಥಿಗಳ ಭವಿಷ್ಯ ನಿರ್ಮಾಣದಲ್ಲಿ ಪ್ರಮುಖ ಪಾತ್ರವಹಿಸಬೇಕು ಎಂದು ಅಪರ ಆಯುಕ್ತರು ನಿರ್ದೇಶನ ನೀಡಿದರು. ▸▸ 3ನೇ ಪುಟಕ್ಕೆ

**ಪ್ರಮುಖಾಂಶಗಳು**

* ಗದಗದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶ ಸುಧಾರಣೆ ಕುರಿತು ಮುಖ್ಯ ಶಿಕ್ಷಕರೊಂದಿಗೆ ಅಪರ ಆಯುಕ್ತರಾದ ಡಾ. ಈಶ್ವರ ಉಳ್ಳಾಗಡ್ಡಿ ಸಂವಾದ.
* ಫಲಿತಾಂಶ ಹೆಚ್ಚಿಸುವುದು ಶಿಕ್ಷಕರ ಸಮೂಹ ಜವಾಬ್ದಾರಿ.
* ಹಿಂದುಳಿದ ವಿದ್ಯಾರ್ಥಿಗಳಿಗೆ ವಿಶೇಷ ತರಬೇತಿ ಮತ್ತು ರಿಮಿಡಿಯಲ್ ತರಗತಿಗಳ ಆಯೋಜನೆ.
* ವಿಷಯವಾರು ಗುರಿ ನಿಗದಿ ಮಾಡಿ ನಿಯಮಿತ ಅಭ್ಯಾಸ ಪರೀಕ್ಷೆ ನಡೆಸಲು ಸೂಚನೆ.
* ಉತ್ತರ ಪತ್ರಿಕೆ ವಿಶ್ಲೇಷಣೆ ಮೂಲಕ ವಿದ್ಯಾರ್ಥಿಗಳ ತಪ್ಪು ಸರಿಗಳನ್ನು ಸರಿಪಡಿಸುವ ಕ್ರಮ.
* ಹಾಜರಾತಿ ಹೆಚ್ಚಿಸಲು ಪೋಷಕರೊಂದಿಗೆ ನಿರಂತರ ಸಂಪರ್ಕ.
* ಡಿಜಿಟಲ್ ಹಾಗೂ ಸ್ಮಾರ್ಟ್ ಕ್ಲಾಸ್ ಸೌಲಭ್ಯಗಳ ಪರಿಣಾಮಕಾರಿ ಬಳಕೆ,

ಪ್ರತಿಯೊಂದು ಶಾಲೆಯೂ ಫಲಿತಾಂಶ ಆಧಾರಿತ ಕಾರ್ಯಯೋಜನೆ ರೂಪಿಸಲು ನಿರ್ದೇಶನ.

# ಆಸೆಯಿಂದ ದೂರ ಇದ್ದರಷ್ಟೇ ನೆಮ್ಮದಿ



■ ವಿಜಯಸಾಕ್ಷಿ ಸುದ್ದಿ, ಡಂಬಳ

ಮನುಷ್ಯನು ಸುಖ, ಶಾಂತಿ, ನೆಮ್ಮದಿ, ಆರೋಗ್ಯದಿಂದ ಬದುಕಬೇಕಾದರೆ ಆಸೆಯಿಂದ ದೂರ ಇದ್ದಾಗ ಮಾತ್ರ ಸಾಧ್ಯ ಎಂದು ಡಂಬಳ-ಗದಗ ಜಗದ್ಗುರು ಡಾ. ತೋಂಟದಾರ್ಯ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ಡಂಬಳ ಗ್ರಾಮದ ಆರಾಧ್ಯ ದೇವರಾದ ಜಗದ್ಗುರು ತೋಂಟ-ದಾರ್ಯ ಮದರ್ಧನಾರೀಶ್ವರರ 286ನೇ ಜಾತ್ರಾ ಮಹೋತ್ಸವದ ನಿಮಿತ್ತ ಲಘು ರಥೋತ್ಸವ, ರೊಟ್ಟಿ ಜಾತ್ರೆಯ ದಾಸೋಹಕ್ಕೆ ಚಾಲನೆ ನೀಡಿ ಧರ್ಮಸಭೆಯ ಸಾನ್ನಿಧ್ಯ ವಹಿಸಿ ಶ್ರೀಗಳು ಮಾತನಾಡಿದರು.

ಕಾಯಕದಿಂದ ಮಾತ್ರ ಪ್ರತಿಫಲದ ಸಂಪತ್ತು ಬರಲಿದೆ. ಕಾಯಕದಿಂದ ಬಂದ ಸಂಪತ್ತಿನಲ್ಲಿ ಕಡು ಬಡವರಿಗೆ ಮತ್ತು ದಾಸೋಹದ ರೂಪದಲ್ಲಿ ಹಂಚಿ ತಿನ್ನಬೇಕು. ಮಹಿಳೆಯರು ಆಯ್ದಕ್ಕಿ ಲಕ್ಕಮ್ಮಳ ವಿಚಾರದಂತೆ ನಡೆದುಕೊಳ್ಳಬೇಕು. ಜಾತ್ರೆಯಲ್ಲಿ ವಿದ್ಯಾರ್ಥಿಗಳು ಸಂಘಟನಾತ್ಮಕವಾಗಿ ಕಾಯಕದ ಜೊತೆಗೆ ಅನ್ನದಾಸೋಹಕ್ಕೆ ಸಹಕಾರ ನೀಡಲು ಮುಂದಾಗುತ್ತಿರುವುದು ಪ್ರಶಂಸನೀಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಹಿರಿಯರಾದ ಶಿವಪ್ಪ ಪ್ಯಾಟಿ, ಯಲ್ಲಪ್ಪ ದಂಡಿನ, ಯಂಕಣ್ಣ ಗಡಗಿ, ಬುಡ್ನೆಸಾಬ ಅತ್ತಾರ, ತಿಮ್ಮಪ್ಪ ವಡ್ಡರ, ಜಿ.ವಿ. ಹಿರೇಮಠ, ಸಿ.ಆರ್. ಹಿರೇಮಠ, ಮುದಿಯಪ್ಪ ಗದಗಿನ, ಗವಿಸಿದ್ದಪ್ಪ ಹಳ್ಳಾಕಾರ, ಮಲ್ಲಿಕಾರ್ಜುನ ಪ್ಯಾಟಿ, ರಾಘು ಹಡಪದ, ದುರಗಪ್ಪ ಹರಿಜನ, ರೇವಣಸಿದ್ದಪ್ಪ ಕರಿಗಾರ, ಬಸವರಾಜ ಹಮ್ಮಗಿ, ಮುದಕಪ್ಪ ಮೇವುಂಡಿ, ಗೌಸುಸಾಬ ಆಲೂರ, ನಾಗರಾಜ ಗಡಗಿ, ಕುಮಾರ ರಸಾಳಕರ, ಭೀಮಪ್ಪ ಪೂಜಾರ, ಮುತ್ತಣ್ಣ ಕೊಂತಿಕಲ್ಲ ಸೇರಿದಂತೆ ಅಪಾರ ಭಕ್ತರು ಭಾಗವಹಿಸಿದ್ದರು. ಶಿಕ್ಷರಾದ ಕೆ.ಬಿ. ಕಂಬಳಿ, ಆರ್.ಜಿ. ಕೊರ್ಲಹಳ್ಳಿ ನಿರೂಪಿಸಿ ವಂದಿಸಿದರು.

## ಸಾಮರಸ್ಯದ ಸಂದೇಶ ಸಾರಿದ ಡಾ. ತೋಂಟದ ಶ್ರೀಗಳು

■ ವಿಜಯಸಾಕ್ಷಿ ಸುದ್ದಿ, ಡಂಬಳ

ಪ್ರತಿ ವರ್ಷದಂತೆ ತೋಂಟ-ದಾರ್ಯ ಮಠದ ಜಾತ್ರೆಯಾದ ಬಳಿಕ ಜರುಗುವ ಜಮಾಲಶಾವಲಿ ಶರಣರ ಗಂಧ ಮತ್ತು ಉರೂಸ್ ಕಾರ್ಯಕ್ರಮಕ್ಕೆ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಚಾಲನೆ ನೀಡುವ ಮೂಲಕ ತಾವು ಸಾಮರಸ್ಯ ಪರ ಎಂಬುಂದನ್ನು ತೋರಿಸಿಕೊಟ್ಟಿದ್ದಾರೆ.

ರಾಷ್ಟ್ರಪತಿ ಡಾ. ಎ.ಪಿ.ಜೆ ಅಬ್ದುಲ ಕಲಾಂರಿಂದ ಕೋಮುಸೌಹಾರ್ದತಾ ಪ್ರಶಸ್ತಿ ಪಡೆದ ಲಿಂ. ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು, ಭಾವೈಕ್ಯತೆಯನ್ನು ಸಾರವ ಮಠ ಎಂದೇ ಪ್ರಸಿದ್ಧಿ ಪಡೆದಿರುವ ಮಠದ 20ನೇ ಪೀಠಾಧಿಪತಿಗಳಾದ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಶೈಕ್ಷಣಿಕ, ಧಾರ್ಮಿಕ ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಹೊಂದುವಂತೆ ಮಾಡುತ್ತಿದ್ದು, ಇದೀಗ ದರ್ಗಾ-ಕ್ಕೆ ಭೇಟಿ ನೀಡುವ ಮೂಲಕ ಸಾಮರಸ್ಯದ ಸಂದೇಶ ಸಾರಿದ್ದಾರೆ.

ಡಾ. ತೋಂಟದ ಸಿದ್ಧರಾಮ ಸ್ವಾಮೀಜಿ ಯಾವಾಗಲೂ ಭಾವೈಕ್ಯತೆಗೆ ಹೆಚ್ಚಿನ ಒತ್ತು ನೀಡುತ್ತಾ ಬಂದಿದ್ದು, ಭಾವೈಕ್ಯತೆ ಉಳಿದು ಬೆಳೆಯಬೇಕು. ಸರ್ವರಿಗೂ ಒಳ್ಳೆಯದಾಗಲಿ. ಎಲ್ಲಾರೂ ಕೂಡಿಕೊಂಡು ಆಚರಣೆ ಮಾಡಿ ಎಂದು ಆಶೀರ್ವಚನ ನೀಡಿದರು.

ಈ ಸಂದರ್ಭದಲ್ಲಿ ಶ್ರೀ ಮಲ್ಲಿಕಾರ್ಜುನ ಸ್ವಾಮೀಜಿ, ಮುಸ್ಲಿಂ ಸಮಾಜದ ಧರ್ಮಗುರುಗಳಾದ ಖಾದರಸಾಬ ಮುಲ್ಲಾ, ಹನುಮಂತಪ್ಪ ಗದಗಿನ, ಅಂಜುಮನ ಅಧ್ಯಕ್ಷ ಬಶೀರಹಮ್ಮದ ತಾಂಬೋಟಿ, ಮರಿತೇಮಪ್ಪ ಆದಮ್ಮನವರ, ಮಳ್ಳಪ್ಪ ಮಠದ, ಖಾಜಾಹುಸೇನ ಹೊಸಪೇಟಿ, ಯಂಕಣ್ಣ ಗಡಗಿ, ಶಫಿ ಮೂಲಿಮನಿ, ಬಸವರಡ್ಡಿ ಬಂಡಿಹಾಳ, ಯಲ್ಲಪ್ಪ ದಂಡಿನ, ಬುಡ್ನೆಸಾಬ ಅತ್ತಾರ, ಭೀಮಪ್ಪ ಗದಗಿನ, ಆರ್.ಜಿ. ಕೊರ್ಲಹಳ್ಳಿ, ಇಂತಿಯಾಜ ದಫೇದಾರ, ಬಸಪ್ಪ ಕೋತಂಬ್ರಿ, ಬಾಬುಸಾಬ ಸರಕಾವಾಸ, ಗವಿಸಿದ್ಧಪ್ಪ ಹಳ್ಳಾಕಾರ, ಬಾಬುಸಾಬ ಮೂಲಿಮನಿ, ತಿಮ್ಮಣ್ಣ ವಡ್ಡರ, ಜಾಕೀರ ಮೂಲಿಮನಿ, ಎಮ್.ಆರ್. ಆಲೂರ, ಅಸಗರ ಸರಕಾವಾಸ, ರಜಾಕಸಾಬ ಆಲೂರ, ಮುರ್ತುಜಾ ಮನಿಯಾರ, ಹುಸೇನಸಾಬ ಮೂಲಿಮನಿ, ಮೀರಾಸಾಬ ದೊಡ್ಡಮನಿ, ಡಿ.ಡಿ. ಸೊರಟೂರ, ಉರುಸ್ ಸಮಿತಿ ಸದಸ್ಯರು, ಗ್ರಾಮದ ಹಿರಿಯರು, ಯುವಕರು ಇದ್ದರು.



### ಸಮಾಜ ತಲೆತಗ್ಗಿಸುವಂತಹ ಅನಾಚಾರಗಳನ್ನು ತಡೆಯಲು ಕ್ರಮ ಕೈಗೊಳ್ಳುವಂತೆ ಒತ್ತಾಯ

# ವ್ಯಾಲೆಂಟೈನ್ ಡೇ ಸಂಸ್ಕೃತಿಯನ್ನು ತಡೆಗಟ್ಟಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವ್ಯಾಲೆಂಟೈನ್ ಡೇ (ಪ್ರೇಮಿಗಳ ದಿನ) ದಿನದಂದು ನಾಗರಿಕ ಸಮಾಜ ತಲೆತಗ್ಗಿಸುವಂತಹ ಅನಾಚಾರಗಳನ್ನು ತಡೆಯಲು ಪೊಲೀಸ್ ಇಲಾಖೆಯಿಂದ ವಿಶೇಷ ಕ್ರಮಗಳನ್ನು ತೆಗೆದುಕೊಳ್ಳಬೇಕು. ಅದಕ್ಕಾಗಿ ಹೆಚ್ಚಿನ ಪೊಲೀಸ್ ನಿಯೋಜನೆ, ಶಾಲಾ-ಕಾಲೇಜು ಆವರಣದಲ್ಲಿ ಗಸ್ತು ಹೆಚ್ಚಿಸುವುದು, ಅತಿವೇಗದ ವಾಹನ ಚಾಲನೆಯ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ಹಿಂದೂ ಜನ ಜಾಗೃತಿ ವತಿಯಿಂದ ಗುರುವಾರ ಪೊಲೀಸ್ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಕಳೆದ ಕೆಲವು ವರ್ಷಗಳಿಂದ ಫೆಬ್ರವರಿ 14ರಂದು ವ್ಯಾಲೆಂಟೈನ್ ಡೇ ಎಂಬ ಹೆಸರಿನಲ್ಲಿ ಪಾಶ್ಚಾತ್ಯ ಸಂಸ್ಕೃತಿ ಭಾರತದಲ್ಲಿ ವ್ಯಾಪಕವಾಗಿ ಹರುಡುತ್ತಿದ್ದು, ಪ್ರೇಮದ ಹೆಸರಿನಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಅಸಭ್ಯ ವರ್ತನೆ, ಯುವತಿಯರ ಮೇಲಿನ ಕಿರುಕುಳ, ಏಕಮುಖ ಪ್ರೇಮದಿಂದ ಉಂಟಾಗುವ ಮಾನಸಿಕ ಒತ್ತಡ, ಬೆದರಿಕೆ, ಹಿಂಸಾತ್ಮಕ ಘಟನೆಗಳು ಹೆಚ್ಚುತ್ತಿವೆ. ವಿವಿಧ ಪಾರ್ಟಿಯ ನೆಪದಲ್ಲಿ ಯುವಕ-ಯುವತಿಯರು ಮದ್ಯಪಾನ, ಧೂಮಪಾನ, ಮಾದಕದ್ರವ್ಯ ಸೇವನೆ ಮುಂತಾದ ಕಾನೂನುಬಾಹಿರ ಚಟುವಟಿಕೆಗಳಲ್ಲಿ ತೊಡಗುತ್ತಿರುವುದು ಸಮಾಜದ ದೃಷ್ಟಿಯಿಂದ ಗಂಭೀರ ಸಮಸ್ಯೆಯಾಗಿದೆ.

ಕೆಲವು ಮತಾಂಧರು ಲವ್ ಜಿಹಾದ್ ಮುಂತಾದ ಸಂಚುಗಳಲ್ಲಿ ಹಿಂದೂ ಹೆಣ್ಣುಮಕ್ಕಳನ್ನು ಬಲಿಯಾಗಿಸುವ ಪ್ರಕರಣಗಳು ಹೆಚ್ಚುತ್ತಿರುವುದು ಕಳವಳಕಾರಿಯಾಗಿದೆ. ಶೈಕ್ಷಣಿಕ ವಾತಾವರಣದಲ್ಲಿ ಅಸಭ್ಯ ಮನೋಭಾವ ಹೆಚ್ಚಾಗುತ್ತಿದ್ದು, ಇದನ್ನು ತಡೆಗಟ್ಟಲು ಕ್ರಮ ಕೈಗೊಳ್ಳಬೇಕು ಎಂದು ಮನವಿ ಪತ್ರದಲ್ಲಿ ವಿನಂತಿಸಲಾಗಿದೆ.

ಮನವಿ ಸ್ವೀಕರಿಸಿದ ಸಿಪಿಐ ಬಿ.ವಿ. ನ್ಯಾಮಗೌಡ ಮತ್ತು ಪಿಎಸ್‌ಐ ನಾಗರಾಜ ಗಡದ ಅವರು ಸೂಕ್ತ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಈ ವೇಳೆ ಶಂಕರ ಬ್ಯಾಡಗಿ, ಪವನ ಬಂಕಾಪುರ, ಶಿವಾನಂದ ಹುಲಕೋಟಿ, ಶಿವರಾಜ ಅಂಗಡಿ, ಮಹಾದೇವಪ್ಪ ಕುಂದಗೋಳ, ಬಸನಗೌಡ ಆಡರಕಟ್ಟಿ, ಗಂಗಾಧರ ಕುಂಬಾರ, ಅಮರೀಶ ಗಾಂಜಿ, ರಾಘವೇಂದ್ರ ಸಾತಪುತೆ, ಬಸವರಾಜ ಗೋಡಿ, ಸುಮಂಗಲಾ ಕುಂಬಾರ, ವಿದ್ಯಾ ಅಂಗಡಿ, ಅನಸೂಯಾ ಸಜ್ಜನರ, ಭುವನೇಶ್ವರಿ ರೋಣದ, ಗೀತಾ ಬಡಿಗೇರ ಮುಂತಾದವರಿದ್ದರು.

ಜನರಲ್ಲಿ ಈ ಬಗ್ಗೆ ಅರಿವು ಮೂಡಿಸುವ ಸಲುವಾಗಿ ಕಾಲೇಜುಗಳಲ್ಲಿ ಭಾರತೀಯ ಸಂಸ್ಕೃತಿಯ ಮಹತ್ವ ಹಾಗೂ ಶಿಸ್ತಿನ ಜೀವನದ ಅಗತ್ಯತೆಯ ಕುರಿತು ಉಪನ್ಯಾಸ, ಜಾಗೃತಿ ಕಾರ್ಯಕ್ರಮ ಆಯೋಜಿಸಬೇಕು.

ವಿದ್ಯಾಸಂಸ್ಥೆಗಳ ಆವರಣದಲ್ಲಿ ಯಾವುದೇ ರೀತಿಯ ವ್ಯಾಲೆಂಟೈನ್ ಡೇ ಆಚರಣೆಗೆ ಅನುಮತಿ ನೀಡಬಾರದು ಎಂಬ ಕಟ್ಟುನಿಟ್ಟಿನ ಸೂಚನೆ ನೀಡಬೇಕು ಎಂದು ಮನವಿ ಸಲ್ಲಿಸಿದರು.

## ಪ್ರೇಮಿಗಳ ದಿನದ ನೆಪದಲ್ಲಿ ನಡೆಯುವ ಅನಾಚಾರ ತಡೆಯಲು ವಿಶೇಷ ಪೊಲೀಸ್ ದಳ ನಿಯೋಜನೆಗೆ ಮನವಿ



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಪ್ರೇಮಿಗಳ ದಿನದ ಹೆಸರಿನಲ್ಲಿ ನಡೆಯುವ ಅನಾಚಾರಗಳನ್ನು ತಡೆಯಲು ವಿಶೇಷ ಪೊಲೀಸ್ ದಳ ನಿಯೋಜನೆ ಮಾಡಬೇಕು ಎಂದು ಹಿಂದೂ ಜನ ಜಾಗೃತಿ ಸಮಿತಿ ಹಗರಿಬೊಮ್ಮನಹಳ್ಳಿ ಪೊಲೀಸ್ ಠಾಣೆಗೆ ಮನವಿ ಸಲ್ಲಿಸಿದೆ.

ಪ್ರೇಮಿಗಳ ದಿನದಂದು ಶಾಲಾ-ಕಾಲೇಜು ಆವರಣಗಳಲ್ಲಿ ಗಸ್ತು ಹೆಚ್ಚಿಸಬೇಕು ಹಾಗೂ ಅತಿವೇಗದಲ್ಲಿ ವಾಹನ ಚಲಾಯಿಸುವವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ. ಪಾಶ್ಚಾತ್ಯ ಸಂಸ್ಕೃತಿಯ ದುಷ್ಪರಿಣಾಮಗಳು ಭಾರತದಲ್ಲಿಯೂ ವ್ಯಾಪಕವಾಗಿ ಹರಡುತ್ತಿದ್ದು, ಇದು ಕಾನೂನು, ಶಾಂತಿ ಮತ್ತು ಸುವ್ಯವಸ್ಥೆಗೆ ಗಂಭೀರ ಸವಾಲಾಗಿ ಪರಿಣಮಿಸಿದೆ ಎಂದು ತಿಳಿಸಲಾಗಿದೆ.

ಪಾಶ್ಚಾತ್ಯ ರಾಷ್ಟ್ರಗಳು ತಮ್ಮ ವ್ಯಾಪಾರಿಕ ಲಾಭಕ್ಕಾಗಿ ಪ್ರೇಮದ ಹೆಸರಿನಲ್ಲಿ ವಿಕೃತ ಆಚರಣೆಗಳನ್ನು ಪ್ರಚಾರ ಮಾಡುತ್ತಿರುವ ಪರಿಣಾಮ, ದೇಶದ ಯುವಪೀಳಿಗೆ ಭೋಗವಾದ, ಅನೈತಿಕತೆ ಮತ್ತು ಅಶಿಸ್ತು ವರ್ತನೆಗೆ ಒಳಗಾಗುತ್ತಿದೆ ಎಂದು ಆರೋಪಿಸಲಾಗಿದೆ. ಪ್ರೇಮಿಗಳ ದಿನಾಚರಣೆಯ ನೆಪದಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಅಸಭ್ಯ ವರ್ತನೆ, ಪ್ರೇಮದ ಭೀಭತ್ಸ ಪ್ರದರ್ಶನ, ಏಕಮುಖ ಪ್ರೀತಿಯಿಂದ ಯುವತಿಯರ ಮೇಲೆ ಕಿರುಕುಳ, ಬೆದರಿಕೆ ಹಾಗೂ ಹಿಂಸಾತ್ಮಕ ಘಟನೆಗಳು ಹೆಚ್ಚಾಗುತ್ತಿರುವುದು ಕಳವಳಕಾರಿ ವಿಷಯ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಇದೇ ವೇಳೆ ಖಾಸಗಿ ಹಾಗೂ ಸಾರ್ವಜನಿಕ ಪಾರ್ಟಿಗಳಲ್ಲಿ ಯುವಕ-ಯುವತಿಯರು ಮದ್ಯಪಾನ, ಧೂಮಪಾನ, ಮಾದಕ ವಸ್ತುಗಳ ಸೇವನೆ ಮುಂತಾದ ಕಾನೂನುಬಾಹಿರ ಚಟುವಟಿಕೆಗಳಲ್ಲಿ ತೊಡಗುತ್ತಿರುವುದು, ಹಾಗೂ ಈ ದಿನದಂದು ಗರ್ಭನಿರೋಧಕ ಸಾಮಗ್ರಿಗಳ ಅತಿಯಾದ ಮಾರಾಟವು ಅನೈತಿಕ ಸಂಬಂಧಗಳ ವೃದ್ಧಿಯನ್ನು ಸೂಚಿಸುತ್ತದೆ ಎಂದು ತಿಳಿಸಲಾಗಿದೆ.

ಯುವತಿಯರನ್ನು ಆಕರ್ಷಿಸುವ ಉದ್ದೇಶದಿಂದ ಅತಿವೇಗದಲ್ಲಿ ವಾಹನ ಚಲಾಯಿಸುವ ಪ್ರವೃತ್ತಿಯಿಂದ ರಸ್ತೆ ಅಪಘಾತಗಳ ಸಂಖ್ಯೆಯೂ ಹೆಚ್ಚುತ್ತಿದೆ. ಅಲ್ಲದೆ, ಸುಳ್ಳು ಹೆಸರು ಮತ್ತು ಸುಳ್ಳು ಗುರುತಿನ ಮೂಲಕ ಯುವತಿಯರನ್ನು ಮೋಸಗೊಳಿಸಿ ‘ಲವ್ ಜಿಹಾದ್’ ಮುಂತಾದ ಸಂಚುಗಳ ಮೂಲಕ ಜೀವನ ಹಾಳು ಮಾಡುವ ಪ್ರಕರಣಗಳು ಸಮಾಜದ ಭದ್ರತೆಗೆ ದೊಡ್ಡ ಅಪಾಯವಾಗಿವೆ. ಇಂತಹವರ ವಿರುದ್ಧ ಪೊಲೀಸ್ ಇಲಾಖೆ ಸನ್ನದ್ಧರಾಗಬೇಕು ಎಂದು ಮನವಿಯಲ್ಲಿ ಕೋರಲಾಗಿದೆ.

ಈ ಸಂದರ್ಭದಲ್ಲಿ ನಿವೃತ್ತ ಸೈನಿಕ ಶಿವಾನಂದ್ ಬೇವೂರ್, ಹಿರಾಳ ಶರಣಪ್ಪ, ರಾಮರೆಡ್ಡಿ, ಪಾಂಡುರಂಗ, ಸರ್ದಾರ್ ಯಮನಪ್ಪ, ಕರಿಬಸಪ್ಪ, ಮಂಜುನಾಥ್, ಕೆ. ರೋಹಿತ್, ಎನ್. ವೀರ ಬಸಪ್ಪ, ಸಂತೋಷ್ ಕುಮಾರ್ ಸೇರಿದಂತೆ ಹಿಂದೂ ಜನ ಜಾಗೃತಿ ಸಮಿತಿಯ ಮುಖಂಡರು ಉಪಸ್ಥಿತರಿದ್ದರು.

### ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಗರಿಷ್ಠ ಸಾಧನೆಗೆ ವಿಭಿನ್ನ ತಂತ್ರ

# ಶೇ. 100ರಷ್ಟು ಗುಣಾತ್ಮಕ ಫಲಿತಾಂಶದ ಗುರಿ

ಗದಗ ಜಿಲ್ಲೆಯಲ್ಲಿ ಈ ವರ್ಷದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯನ್ನು ಯಶಸ್ವಿಯಾಗಿ ಎದುರಿಸಲು ಶಾಲಾ ಶಿಕ್ಷಣ ಇಲಾಖೆ ಮುಂಚಿತ ಹಾಗೂ ಸಮಗ್ರ ಯೋಜನೆಯೊಂದಿಗೆ ಸಜ್ಜಾಗಿದ್ದು, ವಿದ್ಯಾರ್ಥಿ ಕೇಂದ್ರಿತ ಶಿಕ್ಷಣದ ಮೂಲಕ ಶೇ. 100ರಷ್ಟು ಗುಣಾತ್ಮಕ ಫಲಿತಾಂಶ ಸಾಧಿಸುವ ಗುರಿಯೊಂದಿಗೆ ಕಾರ್ಯನಿರ್ವಹಿಸುತ್ತಿದೆ.

ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಶ್ಮಿ ಮಹೇಶ್ ಅವರ ದೃಷ್ಟಿಯಲ್ಲಿ ವಿದ್ಯಾರ್ಥಿಯೇ ಶಿಕ್ಷಣದ ಕೇಂದ್ರಬಿಂದುವಾಗಿದ್ದು, ಅದಕ್ಕೆ ತಕ್ಕಂತೆ ಈ ವರ್ಷದ ಪರೀಕ್ಷಾ ತಯಾರಿಯನ್ನು ರೂಪಿಸಲಾಗಿದೆ. ವಿದ್ಯಾರ್ಥಿಗಳ ಶೈಕ್ಷಣಿಕ ಮಟ್ಟವನ್ನು ಗುರುತಿಸಿ ನಿಧಾನ ಕಲಿಕೆ, ಸರಾಸರಿ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ವಿಭಿನ್ನ ತಂತ್ರಗಳನ್ನು ಅಳವಡಿಸಿರುವುದು ಈ ತಯಾರಿಯ ಪ್ರಮುಖ ವೈಶಿಷ್ಟ್ಯವಾಗಿದೆ.

ಪೂರ್ವ ಸಿದ್ಧತಾ ಪರೀಕ್ಷೆಗಳು–1, 2 ಹಾಗೂ 3, ಇಲಾಖೆಯಿಂದ ಗುರುತಿಸಲಾದ ನಾಲ್ಕು ಮಾದರಿಯ ಪ್ರಶ್ನೆ ಪತ್ರಿಕೆಗಳು, 29 ಅಂಶಗಳ ಅನುಷ್ಠಾನ, ನಿರಂತರ ಮೌಲ್ಯಮಾಪನ, ಫೋನ್‌ಇನ್ ಕಾರ್ಯಕ್ರಮಗಳು, ವಿಷಯವಾರು ಮಾರ್ಗದರ್ಶನ ಹಾಗೂ ಶಿಕ್ಷಕರ ಶೈಕ್ಷಣಿಕ ಸಾಮರ್ಥ್ಯ ವೃದ್ಧಿ ಕಾರ್ಯಕ್ರಮಗಳು ಪರೀಕ್ಷಾ ತಯಾರಿಯನ್ನು ಇನ್ನಷ್ಟು ಗಟ್ಟಿಗೊಳಿಸಿವೆ.

ಶಿಕ್ಷಕರು, ಮುಖ್ಯ ಶಿಕ್ಷಕರು, ಶಿಕ್ಷಣಾಧಿಕಾರಿಗಳು, ಡಯಟ್ ಉಪನ್ಯಾಸಕರು, ಬಿಆರ್‌ಪಿ‌ಸಿಆರ್‌ಪಿ, ಎಸ್‌ಡಿಎಂಸಿ ಹಾಗೂ ಪಾಲಕರ ಸಮನ್ವಯದೊಂದಿಗೆ ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ, ಶಿಸ್ತು ಮತ್ತು ಅಧ್ಯಯನಾಸಕ್ತಿ ಬೆಳೆಸುವ ಪ್ರಯತ್ನಗಳು ಯಶಸ್ವಿಯಾಗಿ ಸಾಗುತ್ತಿವೆ. ‘ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಕುಳಿತಂತ ಎಲ್ಲಾ ಅಭ್ಯರ್ಥಿಗಳು ಶೇ. 100ರಷ್ಟು ಗುಣಾತ್ಮಕ ಫಲಿತಾಂಶ ಗುರಿ



ಹೊಂದಲಿ’ ಎಂಬ ಧ್ಯೇಯದೊಂದಿಗೆ ಕೈಗೊಂಡ ಕ್ರಮಗಳು ಎಲ್ಲರ ಮೆಚ್ಚುಗೆಗೆ ಪಾತ್ರವಾಗಿವೆ.

ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ಪೂರ್ವ ಸಿದ್ಧತಾ ಪರೀಕ್ಷೆಗಳು ಬೂಸ್ಟರ್ ಪರೀಕ್ಷೆಗಳಂತೆ ಕಾರ್ಯನಿರ್ವಹಿಸುತ್ತಿವೆ. ಮೊದಲ ಬಾರಿಗೆ ವಾರ್ಷಿಕ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ಆತ್ಮವಿಶ್ವಾಸ ತುಂಬುವ ಉದ್ದೇಶದಿಂದ ಈ ಪರೀಕ್ಷೆಗಳನ್ನು ನಡೆಸಲಾಗುತ್ತಿದೆ. 2025–26ನೇ ಸಾಲಿನಲ್ಲಿ ವಿದ್ಯಾರ್ಥಿಗಳು ಈಗಾಗಲೇ ಎರಡು ಪೂರ್ವ ಸಿದ್ಧತಾ ಪರೀಕ್ಷೆಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ್ದು, ಮೂರನೇ ಪೂರ್ವ ಸಿದ್ಧತಾ ಪರೀಕ್ಷೆ ಫೆಬ್ರವರಿ 23ರಿಂದ 28ರವರೆಗೆ ನಡೆಯಲಿದೆ. ಈ ವರ್ಷ ವಿಷಯವಾರು ನೀಲನಕ್ಷೆ (ಬ್ಲೂಪ್ರಿಂಟ್) ನೀಡಿರುವುದು ಮತ್ತೊಂದು ವಿಶೇಷವಾಗಿದೆ.

ಯಾವ ಪಠ್ಯದಿಂದ ಎಷ್ಟು ಅಂಕಗಳಿಗೆ ಪ್ರಶ್ನೆಗಳು ಬರುತ್ತವೆ ಎಂಬ ಸ್ಪಷ್ಟ ಮಾಹಿತಿ ಲಭ್ಯವಾಗಿದ್ದು, ಅದರ ಆಧಾರದಲ್ಲಿ ಅಧ್ಯಯನ ಮಾಡಿದರೆ ವಾರ್ಷಿಕ ಪರೀಕ್ಷೆಗೆ ಉತ್ತಮ ಸಿದ್ಧತೆ ಸಾಧ್ಯವಾಗಲಿದೆ. ಹಳೆಯ ಹಾಗೂ ಮಾದರಿ ಪ್ರಶ್ನೆಪತ್ರಿಕೆಗಳ ಅಧ್ಯಯನವು ಪರೀಕ್ಷೆಯ ಮೇಲಿನ ಭಯವನ್ನು ಹೋಗಲಾಡಿಸಿ ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ. ವಿದ್ಯಾರ್ಥಿಗಳು ಶಾಲಾ ಮಟ್ಟದ ಪೂರ್ವ ಸಿದ್ಧತಾ ಪರೀಕ್ಷೆಗಳ ಜೊತೆಗೆ ಸ್ವತಃ ಅಣಕು ಪರೀಕ್ಷೆಗಳನ್ನು ತೆಗೆದುಕೊಳ್ಳುವುದು ಅತ್ಯಂತ ಉಪಯುಕ್ತವಾಗಿದೆ. ಅಣಕು ಪರೀಕ್ಷೆಗಳ ಮೂಲಕ ಉತ್ತರ ಬರವಣಿಗೆಯ ಕೌಶಲ್ಯ, ಸಮಯ ನಿರ್ವಹಣೆ ಹಾಗೂ ಸ್ವಮೌಲ್ಯಮಾಪನಕ್ಕೆ ಅವಕಾಶ ದೊರೆಯುತ್ತದೆ.

ಇದೀಗ ಪರೀಕ್ಷೆಗೆ ಕಡಿಮೆ ಸಮಯ ಉಳಿದಿರುವುದರಿಂದ ವಿದ್ಯಾರ್ಥಿಗಳು ಇರುವ ಸಮಯವನ್ನು ಮೌಲ್ಯಯುತವಾಗಿ ಬಳಸಿಕೊಳ್ಳಬೇಕಿದೆ. ವಿಶೇಷವಾಗಿ ಕಷ್ಟ ಎನಿಸುವ ವಿಷಯಗಳಿಗೆ ಹೆಚ್ಚು ಒತ್ತು ನೀಡುವುದರಿಂದ ಒಟ್ಟಾರೆ ಫಲಿತಾಂಶವನ್ನು ಉತ್ತಮಗೊಳಿಸಬಹುದು.

ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಆರ್.ಎಸ್. ಬುರಡಿ ಹಾಗೂ ಡಯಟ್ ಪ್ರಾಂಶುಪಾಲ ಜಿ.ಎಂ. ಮುಂದಿನಮನಿ ಅವರ ಮಾರ್ಗದರ್ಶನದಲ್ಲಿ, ಜಿಲ್ಲೆಯ ಎಲ್ಲಾ ತಾಲೂಕುಗಳ ಶಿಕ್ಷಣಾಧಿಕಾರಿಗಳು, ಶಿಕ್ಷಣ ಸಂಯೋಜಕರು, ಮುಖ್ಯಶಿಕ್ಷಕರು ಹಾಗೂ ಶಿಕ್ಷಕರು ಒಟ್ಟಾಗಿ ಶ್ರಮಿಸುತ್ತಿದ್ದಾರೆ. ಜಿಲ್ಲೆಯಾದ್ಯಂತ 87ಕ್ಕೂ ಹೆಚ್ಚು ಓದುವ ಮನೆಗಳನ್ನು ನಿರ್ಮಿಸಿ ಸುಮಾರು ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಇದರ ಪ್ರಯೋಜನ ಪಡೆಯುತ್ತಿದ್ದಾರೆ. ನಿಧಾನ ಕಲಿಕೆಯ ಮಕ್ಕಳಿಗೆ ವಿಶೇಷ ತರಗತಿಗಳನ್ನು ಆಯೋಜಿಸುವ ಮೂಲಕ ಅವರನ್ನು ಮುಖ್ಯ ವಾಹಿನಿಗೆ ತರುವ ಪ್ರಯತ್ನ ಶ್ಲಾಘನೀಯವಾಗಿದೆ.

ಗುಣಾತ್ಮಕ ಫಲಿತಾಂಶದತ್ತ ಜಿಲ್ಲೆಯ ಶಾಲೆಗಳ ಸಶಕ್ತ ಹೆಜ್ಜೆ ಗುಣಾತ್ಮಕ ಶಿಕ್ಷಣ ಹಾಗೂ ಶೇ. 100ರಷ್ಟು ಫಲಿತಾಂಶ ಸಾಧನೆಯ ಗುರಿಯೊಂದಿಗೆ ಜಿಲ್ಲೆಯಲ್ಲಿ ‘ಚಿಕಿತ್ಸಕ ವಿಧಾನದ ಕಲಿಕೆ’ಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ. ಶಾಲಾ ಶಿಕ್ಷಣ ಇಲಾಖೆಯಿಂದ ಒದಗಿಸಲಾದ ವಿಷಯವಾರು ಟ್ರ್ಯಾಕಿಂಗ್ ಶೀಟ್‌ಗಳನ್ನು ಬಳಸಿಕೊಂಡು ಪ್ರತಿ ಮಗುವನ್ನು ಮಗುವಾರು ಕಾಳಜಿಯಿಂದ ಟ್ರ್ಯಾಕ್ ಮಾಡುವ ವ್ಯವಸ್ಥೆ ಜಾರಿಗೆ ಬಂದಿದೆ.

ಈ ವ್ಯವಸ್ಥೆಯಡಿ, ಪ್ರತಿ ಮಗುವು ಕಲಿಯದ ಅಂಶಗಳನ್ನು ಗುರುತಿಸಿ, ಅವುಗಳ ಕುರಿತು ಅಗತ್ಯವಿದ್ದಲ್ಲಿ ಓದಿಸುವುದು, ಬೋಧಿಸುವುದು ಹಾಗೂ ಬೋಧನೆಯ ನಂತರ ಚಿಕ್ಕ ಪರೀಕ್ಷೆಗಳ ಮೂಲಕ ಮೌಲ್ಯಮಾಪನ ಮಾಡಿ ತಕ್ಷಣವೇ ಹಿಮ್ಮಾಹಿತಿ ನೀಡಲಾಗುತ್ತಿದೆ. ಇದರಿಂದ ಮಕ್ಕಳ ಕಲಿಕಾ ಕೊರತೆಗಳನ್ನು ತಕ್ಷಣವೇ ಸರಿಪಡಿಸಲು ಸಾಧ್ಯವಾಗಿದ್ದು, ಕಲಿಕೆಯಲ್ಲಿ ಸ್ಪಷ್ಟವಾದ ಪ್ರಗತಿ ಕಂಡುಬರುತ್ತಿದೆ.

ಜಿಲ್ಲೆಯಲ್ಲಿ ಪಾಲಕ–ಶಿಕ್ಷಕರ ಸಮನ್ವಯಕ್ಕೂ ಹೆಚ್ಚಿನ ಒತ್ತು ನೀಡಲಾಗಿದ್ದು, ‘ಬನ್ನಿ ಬನ್ನಿ ಶಾಲೆಗೆ’ ಎಂಬ ಘೋಷವಾಕ್ಯದೊಂದಿಗೆ ಪಾಲಕ–ಶಿಕ್ಷಕರ ಮಹಾಸಭೆಗಳನ್ನು ಆಯೋಜಿಸಲಾಗುತ್ತಿದೆ. ಇದೇ ಘೋಷಣೆಯೊಂದಿಗೆ ಶಾಲೆ ಬಿಟ್ಟ ಮಕ್ಕಳನ್ನು ಪುನಃ ಶಾಲೆಗೆ ಕರೆತಂದು, ಅವರಿಗೆ ಉತ್ತಮ ಭವಿಷ್ಯ ರೂಪಿಸುವ ಕಾರ್ಯವೂ ಪರಿಣಾಮಕಾರಿಯಾಗಿ ನಡೆಯುತ್ತಿದೆ.

ಎಸ್‌ಎಸ್‌ಎಲ್‌ಸಿ ಫಲಿತಾಂಶವನ್ನು ಇನ್ನಷ್ಟು ಬಲಪಡಿಸುವ ಉದ್ದೇಶದಿಂದ, ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಜಿಲ್ಲೆಯ ಎಲ್ಲಾ ಮುಖ್ಯ ಶಿಕ್ಷಕರಿಗೆ ವಿಶೇಷ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಅಲ್ಲದೆ, ಮಾನ್ಯ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಗುಣಾತ್ಮಕ ಫಲಿತಾಂಶ ಸಾಧನೆಯಲ್ಲಿ ನಮ್ಮೆಲ್ಲರ ಪಾತ್ರ ಕುರಿತು ವಿಶೇಷ ಕಾರ್ಯಾಗಾರಗಳನ್ನು ನಡೆಸಲಾಗುತ್ತಿದೆ.

ಜಿಲ್ಲೆಯ ಶಾಲೆಗಳಲ್ಲಿ ಪರೀಕ್ಷೆಯನ್ನು ಒತ್ತಡದ ವಿಷಯವಲ್ಲದೆ, ಒಂದು ಹಬ್ಬದಂತೆ ಆಚರಿಸುವ ಸಂಸ್ಕೃತಿಯನ್ನು ಬೆಳೆಸಲಾಗುತ್ತಿರುವುದು ಎಲ್ಲರಿಗೂ ಹೆಮ್ಮೆಯ ವಿಷಯವಾಗಿದೆ. ಇದರಿಂದ ಮಕ್ಕಳಲ್ಲಿ ಪರೀಕ್ಷೆಯ ಭಯ ಕಡಿಮೆಯಾಗಿದ್ದು, ಆತ್ಮವಿಶ್ವಾಸ ಹೆಚ್ಚಾಗಿದೆ.

“ಬನ್ನಿ ಬದಲಾಗೋಣ, ಬದಲಿಸೋಣ, ಪ್ರಗತಿ ಸಾಧಿಸೋಣ” ಎಂಬ ಘೋಷವಾಕ್ಯದೊಂದಿಗೆ, ಅತ್ಯುತ್ತಮ ಫಲಿತಾಂಶ ನಮ್ಮದಾಗಲಿ ಎಂಬ ಆಶಾಭಾವನೆಯೊಂದಿಗೆ ಜಿಲ್ಲೆಯ ಶಿಕ್ಷಕರು, ಶಿಕ್ಷಣಾಧಿಕಾರಿಗಳು, ಪಾಲಕರು ಮತ್ತು ಆಡಳಿತ ವರ್ಗ ಒಟ್ಟಾಗಿ ಶ್ರಮಿಸುತ್ತಿದೆ. ಈ ಸಮಗ್ರ ಪ್ರಯತ್ನಗಳಿಂದಾಗಿ ಜಿಲ್ಲೆಯಲ್ಲಿ ಈ ವರ್ಷವೂ ಗುಣಾತ್ಮಕ ಹಾಗೂ ಮಾದರಿಯಾದ ಫಲಿತಾಂಶ ಕಾಣಿಸಿಕೊಳ್ಳಲಿದೆ ಎಂಬ ವಿಶ್ವಾಸ ವ್ಯಕ್ತವಾಗುತ್ತಿದೆ. ಗದಗ ಜಿಲ್ಲೆಯಲ್ಲಿ ಈ ವರ್ಷದ ಎಸ್‌ಎಸ್‌ಎಲ್‌ಸಿ ಪರೀಕ್ಷಾ ತಯಾರಿ ವ್ಯವಸ್ಥಿತ ಹಾಗೂ ಫಲಿತಾಂಶೋನ್ಮುಖವಾಗಿದ್ದು, ಶೇ. 100ರಷ್ಟು ಗುಣಾತ್ಮಕ ಫಲಿತಾಂಶ ಸಾಧನೆಯತ್ತ ಜಿಲ್ಲೆಯು ಆತ್ಮವಿಶ್ವಾಸದಿಂದ ಮುನ್ನಡೆಯುತ್ತಿದೆ.



– ಎಂ.ಎಚ್. ಸವದತ್ತಿ.
ತಾಂತ್ರಿಕ ಸಹಾಯಕರು,
ಸಮಗ್ರ ಶಿಕ್ಷಣ
ಕರ್ನಾಟಕ-ಗದಗ.

### ಕ.ಸಾ.ಪ ವತಿಯಿಂದ ವರಕವಿ ಡಾ. ದ.ರಾ. ಬೇಂದ್ರೆ ಅವರ ಜನ್ಮ ದಿನಾಚರಣೆ ಕಾರ್ಯಕ್ರಮ

# ಬೇಂದ್ರೆಯವರ ಬದುಕೇ ಕನ್ನಡತನದ ಸಾಕ್ಷಿ ಪ್ರಜ್ಞೆ




ಹಿರಿಯ ಸಾಹಿತಿ ಸಿ.ಜಿ. ಹಿರೇಮಠ ಮಾತನಾಡುತ್ತಾ, ಧಾರವಾಡದ ಒಂದಿಷ್ಟು ಜನ ಬೇಂದ್ರೆಯವರಲ್ಲಿ ಬಂದು ಅಲ್ಲಿನ ಹುಚ್ಚಾಸ್ಪತ್ರೆಯ ಕಾಂಪೌಂಡ್ ಕಟ್ಟಿಸಲು ಸಹಾಯಧನ ದೇಣಿಗೆ ಕೇಳಿದಾಗ ಬೇಂದ್ರೆಯವರು ದೇಣಿಗೆ ನೀಡುತ್ತೇನೆ, ಆದರೆ ನೀವು ಇಡೀ ಧಾರವಾಡಕ್ಕೆ ಕಂಪೌಂಡ್ ಕಟ್ಟಿಸಬೇಕು ಎಂದು ಹೇಳಿದ ಘಟನೆ ಹಾಗೂ ಇನ್ನಿತರ ಹಲವು ಅವರ ಜೀವನದ ಘಟನೆಗಳು ಮತ್ತು ಅವರ ಹಾಸ್ಯಪ್ರಜ್ಞೆಯನ್ನು ಹಂಚಿಕೊಂಡರು.

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬೆಂದ್ರ ಬೇಂದ್ರೆ ಅಕ್ಕಾರ, ನಕ್ಕು ಸಾಯಿರೋ ನಕ್ಕು ಸಾಯಿರಿ. ನಕ್ಕು ಸತ್ರ ನಕ್ಷತ್ರ ಆಕ್ಕಿರಿ – ಈ ತೆರನಾದ ಬದುಕಿನ ಅನುಭಾವದ ಮಾತುಗಳು ಅವರ ಜೀವನದಲ್ಲಿ ಕಂಡುಂಡ ಅನುಭವಗಳಾಗಿದ್ದವು. ಅವರ ತಾಯಿ ನಮ್ಮ ಪಕ್ಕದ ಶಿರಹಟ್ಟಿಯವರು ಎನ್ನುವುದೇ ನಮಗೆ ಅಭಿಮಾನದ ಸಂಗತಿ ಎಂದು ಹಿರಿಯ ಸಾಹಿತಿ ಕೊತ್ತಲ ಮಹಾದೇವಪ್ಪ ಅಭಿಪ್ರಾಯಪಟ್ಟರು.

ಅವರು ಲಕ್ಷ್ಮೇಶ್ವರದ ಈಶ್ವರ ನಗರ ಬಡಾವಣೆಯ ಈಶ್ವರ ದೇವಸ್ಥಾನದ ಪ್ರಾಂಗಣದಲ್ಲಿ ಲಕ್ಷ್ಮೇಶ್ವರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಹಮ್ಮಿಕೊಂಡ ವರಕವಿ ಡಾ. ದ.ರಾ. ಬೇಂದ್ರೆ ಅವರ ಜನ್ಮ ದಿನಾಚರಣೆಯ ಕಾರ್ಯಕ್ರಮದಲ್ಲಿ ಮಾತನಾಡಿದರು.

ಪತ್ರಕರ್ತ ನಾಗರಾಜ ಹಣಗಿ ಮಾತನಾಡಿ, ರಸವೇ ಜನನ, ವಿರಸವೇ ಮರಣ, ಸಮರಸವೇ ಜೀವನ ಎಂಬ ಶ್ರೇಷ್ಠ ಸಂದೇಶವನ್ನು ನಾಡಿಗೆ ನೀಡಿದ ವರಕವಿ ಡಾ. ದ.ರಾ. ಬೇಂದ್ರೆಯವರ ಬದುಕೇ ಕನ್ನಡತನದ ಸಾಕ್ಷಿ ಪ್ರಜ್ಞೆ, ಅವರ ಸಾಹಿತ್ಯ ಬಗೆದಷ್ಟು ಆಳವಾದುದು. ಸರಳ ಪದಗಳಲ್ಲಿ ಬದುಕಿನ ರೀತಿ ನೀತಿ ಕಟ್ಟಿಕೊಟ್ಟ ಅವರು ಪದಗಾರುಡಿಗ ಎಂದು ಹೇಳಿದರು.

ವೇದಿಕೆಯಲ್ಲಿ ಹಿರಿಯ ಸಾಹಿತಿಗಳಾದ ಎಸ್.ಎಫ್. ಆದಿ, ಕೆ.ಎಸ್. ಕೊಡ್ಲಿವಾಡ, ಶರಣಪ್ಪ ಆಲೂರು, ಪುರಸಭಾ ಮಾಜಿ ಅಧ್ಯಕ್ಷೆ ಅಶ್ವಿನಿ ಅಂಕಲಕೋಟಿ, ಕರವೇ ಸ್ವಾಭಿಮಾನಿ ಬಣದ ಜಿಲ್ಲಾಧ್ಯಕ್ಷ ಶರಣು ಗೋಡಿ ಉಪಸ್ಥಿತರಿದ್ದರು.

ಕಸಾಪ ಸಲಹಾ ಸಮಿತಿಯ ಎಸ್.ಎನ್. ಮಳಲಿ, ಎಸ್.ಬಿ. ಅಣ್ಣಿಗೇರಿ, ಸೋಮಶೇಖರ ಕೆರಿಮನಿ, ಆರ್.ಎಸ್. ಗಾಣಿಗೇರ, ಬಿ.ಎಸ್. ಬಾಳೇಶ್ವರಮಠ, ಜೆ.ಎಸ್. ರಾಮಶೆಟ್ರ, ಕ.ರಾ.ವಿ.ಪ ಜಿಲ್ಲಾಧ್ಯಕ್ಷ ರಮೇಶ ರಿತ್ತಿ, ಎಸ್.ಎಫ್. ಕೊಡ್ಲಿ, ಐ.ಎ. ಬಳಿಗಾರ, ಎಂ.ಎ. ಕಲಬುರ್ಗಿ, ಎಸ್.ವಿ. ಕನೋಜ, ಮಹಾಂತೇಶ ಬೇರಗಣ್ಣವರ, ಶಂಕರ ಶಿಳ್ಳಿನ, ಕದಳಿ ವೇದಿಕೆಯ ತಾಲೂಕಾಧ್ಯಕ್ಷೆ ನಿರ್ಮಲಾ ಅರಳಿ, ರತ್ನಕ್ಕ ಕರ್ಕಿ, ಶಿವಾನಂದ ವಡಕಣ್ಣವರ, ಡಾ.ಶಿವಾನಂದ ಹೂವಿನ, ಗಂಗಾಧರ ಅರಳಿ, ಎಂ.ಕೆ. ಕಳ್ಳಿಮಠ, ಸೊಲಬಪ್ಪ ಸಜ್ಜನ, ಎನ್.ಬಿ. ತಳ್ಳಳ್ಳಿ, ಕೈಸರ್ ಮಹಮ್ಮದ್ ಅಲಿ, ಗಿರೀಶ ಸಜ್ಜನ ಮುಂತಾದವರು ಭಾಗವಹಿಸಿದ್ದರು.

ಕಸಾಪ ತಾಲೂಕಾಧ್ಯಕ್ಷ ಈಶ್ವರ ಮೆಡ್ಲೇರಿ ಸ್ವಾಗತಿಸಿದರು. ಗೌರವ ಕಾರ್ಯದರ್ಶಿ ಮಂಜುನಾಥ ಚಾಕಲಬ್ಬಿ ನಿರೂಪಿಸಿದರು. ಪ್ರಾಚಾರ್ಯ ನಾಗರಾಜ ಕಳಸಾಪುರ ವಂದಿಸಿದರು. ನಾಗರಾಜ ಮಜ್ಜಿಗುಡ್ಡ ನಿರ್ವಹಿಸಿದರು.

# ಗ್ಯಾರಂಟಿ ಯೋಜನೆಗಳ ಸೌಲಭ್ಯ ಕಟ್ಟ ಕಡೆಯ ವ್ಯಕ್ತಿಗೂ ಸಿಗಲಿ

▶▶ಮೊದಲನೇ ಪುಟದಿಂದ

ವೇದಿಕೆ ವ್ಯವಸ್ಥೆ, ಫಲಾನುಭವಿಗಳ ಚರ್ಚೆ, ಊಟೋಪಹಾರದ ವ್ಯವಸ್ಥೆ ಸೇರಿದಂತೆ ಸಮಾವೇಶವು ಯಾವುದೇ ಲೋಪದೋಷಗಳಿಲ್ಲದಂತೆ ಅಚ್ಚುಕಟ್ಟಾಗಿ ನಡೆಸಬೇಕೆಂದು ಎಸ್. ಆರ್. ಪಾಟೀಲ ಸೂಚಿಸಿದರು.

ಗೃಹಲಕ್ಷ್ಮೀ ಯೋಜನೆಯಡಿ 2026ರ ಜನವರಿ ಅಂತ್ಯದವರೆಗೆ 258215 ನೋಂದಣಿಯಾದ ಅರ್ಜಿಗಳ ಪೈಕಿ 249353 ಅರ್ಜಿಗಳಿಗೆ ಮಂಜೂರಾತಿ ದೊರೆದಿದೆ. ಗೃಹಲಕ್ಷ್ಮೀ ಯೋಜನೆಯಡಿ 23 ಮರಣ ಹೊಂದಿದ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಜಮೆಯಾಗಿರುವ ಮೊತ್ತ 1,79,600 ರೂ.ಗಳನ್ನು ಸರ್ಕಾರಕ್ಕೆ ಜಮೆ ಮಾಡಲಾಗಿದೆ.

ಶಕ್ತಿ ಯೋಜನೆಯಡಿ ಜಿಲ್ಲೆಯಲ್ಲಿ 11-6-2023ರಿಂದ 31-1-2026ರವರೆಗೆ 25.54 ಕೋಟಿ ಮಹಿಳಾ ಪ್ರಯಾಣಿಕರು ಪ್ರಯಾಣಿಸಿದ್ದು, 863.57 ಕೋಟಿ ರೂ. ಆದಾಯವಾಗಿದೆ. ಗೃಹಜ್ಯೋತಿ ಯೋಜನೆಯಡಿ ಯೋಜನೆ ಆರಂಭದಿಂದ ಜನವರಿ 2026ರವರೆಗೆ ಒಟ್ಟು 278428 ಸ್ಥಾವರಗಳಿದ್ದು, ಆ ಪೈಕಿ 274305 ಸ್ಥಾವರಗಳ ನೋಂದಣಿಯಾಗಿದೆ.

ಯುವನಿಧಿ ಯೋಜನೆಯಡಿ ಜನವರಿ 2024ರಿಂದ ಸೆಪ್ಟೆಂಬರ್ 2025ರವರೆಗೆ 6356 ಅರ್ಜಿಗಳು ಸ್ವೀಕೃತವಾಗಿದ್ದು, ಅದರಲ್ಲಿ 4048 ಅರ್ಹ ಫಲಾನುಭವಿಗಳಿಗೆ ಡಿ.ಬಿ.ಟಿ ಮೂಲಕ ಹಣ ವರ್ಗಾವಣೆಯಾಗಿದೆ. ಬಾಕಿ ಉಳಿದ 2308 ಅಭ್ಯರ್ಥಿಗಳು ಯುವನಿಧಿ ಯೋಜನೆಯ ಷರತ್ತುಗಳಿಗೆ ಹಂತ ಹಂತವಾಗಿ ಅರ್ಹರಾಗುತ್ತಾರೆ.

ಅನ್ನಭಾಗ್ಯ ಯೋಜನೆಯಡಿ ಜುಲೈ 2023ರಿಂದ ಡಿಸೆಂಬರ್ 2024ರವರೆಗೆ 7,91,130 ಫಲಾನುಭವಿಗಳಿಗೆ ಡಿ.ಬಿಟಿ ಮುಖಾಂತರ 216,82,39,330 ರೂ. ಪಾವತಿಯಾಗಿದೆ. ಫೆಬ್ರವರಿ 2025ರಿಂದ ಜನವರಿ 2026ರವರೆಗೆ ಅನ್ನಭಾಗ್ಯ ಯೋಜನೆಯಡಿ ಹೆಚ್ಚುವರಿ 5 ಕೆ.ಜಿ. ಅಕ್ಕಿ ಆಹಾರ ಧಾನ್ಯಗಳ ಹಂಚಿಕೆಯಡಿ 4,69,347 ಕ್ವಿಂಟಲ್ ಹಂಚಿಕೆ ಮಾಡಲಾಗಿದೆ ಎಂದು ಸಂಬಂಧಿತ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ತಾಲೂಕು ಮಟ್ಟದ ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷರುಗಳಾದ ಅಶೋಕ ಮಂದಾಲಿ, ವೀರಯ್ಯ ಮಠಪತಿ, ಡಿ.ಡಿ. ಮುರ್ನಾಳ, ಜಿಲ್ಲಾಧಿಕಾರಿ ಹಾಗೂ ಜಿ.ಪಂ ಮುಖ್ಯ ನಿರ್ವಹಣಾಧಿಕಾರಿ ಸಿ.ಎನ್. ಶ್ರೀಧರ್, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಜಿ.ಪಂ ಯೋಜನಾ ನಿರ್ದೇಶಕ ಎಂ.ವಿ. ಚಳಗೇರಿ, ಜಿಲ್ಲಾ ಹಾಗೂ ತಾಲೂಕು ಸಮಿತಿ ಸದಸ್ಯರು, ಗ್ಯಾರಂಟಿ ಯೋಜನೆ ಸಂಬಂಧಿತ ಅಧಿಕಾರಿಗಳು ಹಾಜರಿದ್ದರು.

## ಅತ್ಯಾಚಾರಿ ಅಸಾರಾಂ ಆಶ್ರಮದ ಭೂಮಿ ವಶಕ್ಕೆ ಪಡೆಯಲು ಸರ್ಕಾರಕ್ಕೆ ಹೈಕೋರ್ಟ್ ಅನುಮತಿ

■ವಿಜಯಸಾಕ್ಷಿ ಸುದ್ದಿ, ಗುಜರಾತ

ಅತ್ಯಾಚಾರ ಪ್ರಕರಣದ ಅಪರಾಧಿ ಮತ್ತು ಸ್ವಯಂ ಘೋಷಿತ ದೇವಮಾನವ ಅಸಾರಾಂ ಬಾಪುನ ಅಹಮದಾಬಾದ್‌ನ ಮೊಟೇರಾದಲ್ಲಿರುವ ಆಶ್ರಮದಿಂದ 45,000 ಚದರ ಮೀಟರ್‌ಗೂ ಹೆಚ್ಚು ಭೂಮಿಯನ್ನು ವಾಪಸ್ ಪಡೆಯಲು ಗುಜರಾತ್ ಹೈಕೋರ್ಟ್ ರಾಜ್ಯ ಸರ್ಕಾರಕ್ಕೆ ಅನುಮತಿ ನೀಡಿದೆ. ಸರ್ಕಾರದ ಕ್ರಮವನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಗಳ ವಿಚಾರಣೆಯ ನಂತರ ಈ ಆದೇಶ ಹೊರಡಿಸಲಾಗಿದೆ.


ಅಧಿಕಾರಿಗಳು ಅಂದಾಜು ಪ್ರಕಾರ 500 ಕೋಟಿ ರೂಪಾಯಿ ಮೌಲ್ಯದ ಆಶ್ರಮದ ಭೂಮಿ ಮೊಟೇರಾದ ನರೇಂದ್ರ ಮೋದಿ ಕ್ರೀಡಾಂಗಣದ ಬಳಿ ಇದೆ.

ನ್ಯಾಯಾಲಯದ ವಿಚಾರಣೆಯ ಸಮಯದಲ್ಲಿ, ಹಲವು ದಶಕಗಳ ಹಿಂದೆ ಕೇವಲ ಸೀಮಿತ ಧಾರ್ಮಿಕ ಬಳಕೆಗಾಗಿ ಮಾತ್ರ ಆಶ್ರಮಕ್ಕೆ ಭೂಮಿ ಮಂಜೂರು ಮಾಡಲಾಗಿತ್ತು. ಈ ಮಂಜೂರಾತಿಯು ಕೆಲವು ಕಟ್ಟುನಿಟ್ಟಾದ ಷರತ್ತುಗಳಿಗೆ ಒಳಪಟ್ಟಿದ್ದು, ಅದರಂತೆ ಅಲ್ಲಿ ಯಾವುದೇ ರೀತಿಯ ವಾಣಿಜ್ಯ ಚಟುವಟಿಕೆಗಳನ್ನು ನಡೆಸುವಂತಿಲ್ಲ, ಅನಧಿಕೃತ ಕಟ್ಟಡಗಳನ್ನು ನಿರ್ಮಿಸುವಂತಿಲ್ಲ ಮತ್ತು ಸರ್ಕಾರವು ನಿಗದಿಪಡಿಸಿದ ಪ್ರದೇಶವನ್ನು ಮೀರಿ ಜಾಗವನ್ನು ವಿಸ್ತರಣೆ ಮಾಡುವಂತಿಲ್ಲ ಎಂದು ಸರ್ಕಾರ ಸ್ಪಷ್ಟಪಡಿಸಿದೆ. ಈ ಷರತ್ತುಗಳನ್ನು ಕಾಲಾನಂತರದಲ್ಲಿ ಉಲ್ಲಂಘಿಸಲಾಗಿದೆ, ಮೂಲತಃ ಹಂಚಿಕೆಯಾಗಿದ್ದಕ್ಕಿಂತ ಹೆಚ್ಚಿನ ಭೂಮಿಯಲ್ಲಿ ನಿರ್ಮಾಣ ಕಾರ್ಯ ಕೈಗೊಳ್ಳಲಾಗಿದೆ ಎಂದಿದೆ.

ರಾಜ್ಯ ಸರ್ಕಾರದ ಪರವಾಗಿ ನ್ಯಾಯಾಲಯಕ್ಕೆ ಹಾಜರಾದ ಪ್ರಮುಖ ಸರ್ಕಾರಿ ಅಭಿಯೋಜಕ. ಭೂಮಿಯನ್ನು ಮರಳಿ ಪಡೆಯುವ ಕ್ರಮವು ದೀರ್ಘ ಮತ್ತು ರಚನಾತ್ಮಕ ಆಡಳಿತ ಪ್ರಕ್ರಿಯೆಯ ಫಲಿತಾಂಶವಾಗಿದೆ ಎಂದು ತಿಳಿಸಿದ್ದಾರೆ.


### ಕ್ಯಾಂಟರ್-ಕ್ರೂಸರ್ ನಡುವೆ ಭೀಕರ ಅಪಘಾತ । ಮೂವರು ಕೃಷಿ ಕಾರ್ಮಿಕರ ಸಾವು, 6 ಜನರ ಸ್ಥಿತಿ ಗಂಭೀರ

# ಬೆಳ್ಳಂಬೆಳಿಗ್ಗೆ ಜವರಾಯನ ಅಟ್ಟಹಾಸ




ಈ ದುರ್ಘಟನೆಯಿಂದ ಮನಸ್ಸಿಗೆ ತುಂಬಾ ನೋವಾಗಿದೆ. ಮೃತರ ಹಾಗೂ ಗಾಯಗೊಂಡವರ ಕುಟುಂಬಸ್ಥರೊಂದಿಗೆ ನಾನಿದ್ದು, ಯಾವುದಕ್ಕೂ ಎದೆಗುಂದಬಾರದು. ನಡೆದಿರುವ ಘಟನೆ ಬಗ್ಗೆ ಮುಖ್ಯಮಂತ್ರಿಗಳ ಗಮನಕ್ಕೆ ತರಲಾಗಿದೆ.

– ಜಿ.ಎಸ್. ಪಾಟೀಲ.
ಶಾಸಕರು.



■ವಿಜಯಸಾಕ್ಷಿ ಸುದ್ದಿ, ರೋಣ


ರೋಣ ತಾಲೂಕಿನ ಜಿಗಳೂರ ಗ್ರಾಮದ ಸೇತುವೆ ಬಳಿ ಗುರುವಾರ ಬೆಳಗಿನ ಜಾವ ಕ್ರೂಸರ್ ಮತ್ತು ಕ್ಯಾಂಟರ್ ನಡುವೆ ಸಂಭವಿಸಿದ ಭೀಕರ ರಸ್ತೆ ಅಪಘಾತಲ್ಲಿ ಸ್ಥಳದಲ್ಲಿಯೇ ಮೂವರು ಮಹಿಳಾ ಕೃಷಿ ಕಾರ್ಮಿಕರು ಸಾವನ್ನಪ್ಪಿದ್ದು, 6 ಜನರು ಗಂಭೀರವಾಗಿ ಗಾಯಗೊಂಡು, 9 ಜನರು ಗಾಯಗೊಂಡ ದುರ್ಘಟನೆ ನಡೆದಿದೆ.

ಗಜೇಂದ್ರಗಡ ಪಟ್ಟಣದಿಂದ ರೋಣ ಪಟ್ಟಣಕ್ಕೆ ಕಡಲೆ ಕೀಳಲು ಕಾರ್ಮಿಕರನ್ನು ಕರೆತರುತ್ತಿದ್ದ ಕ್ರೂಸರ್ ವಾಹನಕ್ಕೆ ರೋಣ ಪಟ್ಟಣದಿಂದ ಗಜೇಂದ್ರಗಡಕ್ಕೆ ತೆರಳುತ್ತಿದ್ದ ಕ್ಯಾಂಟರ್ ವಾಹನವು ಢಿಕ್ಕಿ ಹೊಡೆದ ಪರಿಣಾಮ ಈ ಅವಘಡ ಸಂಭವಿಸಿದೆ. ಢಿಕ್ಕಿಯ ರಭಸಕ್ಕೆ ಕ್ರೂಸರ್ ವಾಹನವು ರಸ್ತೆ ಬಿಟ್ಟು ಜಮೀನಿನಲ್ಲಿ ಬಿದ್ದಿದ್ದು, ಕ್ಯಾಂಟರ್ ವಾಹನವು ರಸ್ತೆಯಿಂದ 20 ಅಡಿ ದೂರದ ಮರಕ್ಕೆ ಸಿಲುಕಿಕೊಂಡಿದೆ.

ಕೂಲಿ ಕೆಲದವರನ್ನು ಕರೆದುಕೊಂಡು ಬರುತ್ತಿದ್ದ ಕ್ರೂಸರ್ ವಾಹನದಲ್ಲಿ ಒಟ್ಟು 17 ಜನ ಕಾರ್ಮಿಕರಿದ್ದರು ಎನ್ನಲಾಗಿದ್ದು, ಗಜೇಂದ್ರಗಡ ಪಟ್ಟಣದ ಶಿವಾಜಿ ಪೇಟೆಯ ನಿವಾಸಿಗಳಾದ ಮರಿಯಂಬು ರಾಜೇಸಾಬ ಹುನಗುಂದ, ಅನ್ನಪೂರ್ಣ ಲಕ್ಷ್ಮಣ ಚಂಗಳಿ, ಸುಜಾತ ರಾಜಪ್ಪ ಹೊಸಮನಿ ಎಂಬ ಮಹಿಳೆಯರು ಸ್ಥಳದಲ್ಲಿಯೇ ಕೊನೆಯುಸಿರೆಳೆದಿದ್ದಾರೆ. ಲಕ್ಷ್ಮವ್ವ ಬೋಯಿಟೆ, ಲಕ್ಷ್ಮೀ ಹಾಳಕೇರಿ, ದುರ್ಗಮ್ಮ ಕಲ್ಗುಡಿ, ರುಕ್ಕವ್ವ ಆರ್ಯರ, ರತ್ನವ್ವ ಜಾಧವ, ಯಲ್ಲಮ್ಮ ಲೋಖಂಡೆ ಗಂಭೀರವಾಗಿ ಗಾಯಗೊಂಡಿದ್ದಾರೆ.

ಯಮನವ್ವ ಹಾಳಕೇರಿ, ಲಕ್ಷ್ಮವ್ವ ಹಾಳಕೇರಿ, ಶಾಂತವ್ವ ಜನಾಯಿ, ಲಕ್ಷ್ಮೀ ಹಾಳಕೇರಿ, ಶಶಿಕಲಾ ಮರಾಠಿ, ರತ್ನವ್ವ ಗೌಡರ, ಸುನಂದಾ ಹಾಳಕೇರಿ, ಸವಿತಾ ಹಾಳಕೇರಿ ಮತ್ತು ಕ್ರೂಸರ್ ಚಾಲಕ ಶಿವನಗೌಡ ಹೊಸಗೌಡ್ರ ಎಂಬುವರಿಗೆ ಸಣ್ಣಪುಟ್ಟ ಗಾಯಗಳಾಗಿದ್ದು, ರೋಣ ಸರಕಾರಿ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ನೀಡಿ ಗದಗ ಜಿಲ್ಲಾ ಆಸ್ಪತ್ರೆಗೆ ಕಳುಹಿಸಿಕೊಡಲಾಗಿದೆ. ಕ್ಯಾಂಟರ್ ಚಾಲನ ನಾಪತ್ತೆಯಾಗಿದ್ದು, ರೋಣ ಪೊಲೀಸರು ಶೋಧ ನಡೆಸಿದ್ದಾರೆ. ಅಪಘಾತ ನಡೆದ ಸ್ಥಳಕ್ಕೆ ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ ಭೇಟಿ ನೀಡಿ ಇಲಾಖೆಯ ಅಧಿಕಾರಿಗಳಿಂದ ಅಗತ್ಯ ಮಾಹಿತಿ ಪಡೆದುಕೊಂಡರು. ಈ ಸಂಧರ್ಭದಲ್ಲಿ ಸಿಪಿಐ ವಿಜಯಕುಮಾರ, ಪಿಎಸ್‌ಐ ಪ್ರಕಾಶ ಬಣಕಾರ ಉಪಸ್ಥಿತರಿದ್ದರು.

## ಹಗರಿ ಹಳ್ಳದಲ್ಲಿ ಭಾರೀ ಗಾತ್ರದ ಮೊಸಳೆ ಪ್ರತ್ಯಕ್ಷ: ಆತಂಕದಲ್ಲಿ ಗ್ರಾಮಸ್ಥರು!



■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ಬ್ಯಾಲಾಳ ಸಮೀಪದ ಹಗರಿ ಹಳ್ಳದಲ್ಲಿ ಭಾರೀ ಗಾತ್ರದ ಮೊಸಳೆವೊಂದು ಪ್ರತ್ಯಕ್ಷವಾಗಿರುವ ಘಟನೆ ಸ್ಥಳೀಯರಲ್ಲಿ ಭಾರೀ ಆತಂಕಕ್ಕೆ ಕಾರಣವಾಗಿದೆ. ಕಳೆದ ಮೂರು ತಿಂಗಳಿಂದ ಹಗರಿ ಹಳ್ಳದಲ್ಲಿ ನಿರಂತರವಾಗಿ ನೀರು ಹರಿಯುತ್ತಿದ್ದು, ಹೆಚ್ಚಿನ ಪ್ರಮಾಣದ ನೀರು ಸಂಗ್ರಹವಾಗಿರುವ ಹಿನ್ನೆಲೆಯಲ್ಲಿ ಮೊಸಳೆಗಳು ಕಾಣಿಸಿಕೊಳ್ಳುತ್ತಿವೆ ಎಂದು ಗ್ರಾಮಸ್ಥರು ತಿಳಿಸಿದ್ದಾರೆ.

ಪ್ರತಿನಿತ್ಯ ಮೊಸಳೆ ಹಗರಿ ಹಳ್ಳದ ದಂಡೆಯಲ್ಲಿ ಬಂದು ಮಲಗುತ್ತಿರುವುದು ಕುರಿಗಾಹಿಗಳು, ದನ ಕಾಯುವವರು ಹಾಗೂ ಸಾರ್ವಜನಿಕರಲ್ಲಿ ಭಯ ಹುಟ್ಟಿಸಿದೆ. ಕುರಿ ಮತ್ತು ದನಗಳನ್ನು ಮೇಯಿಸಲು ತೆರಳುವ ವೇಳೆ ಮೊಸಳೆ ಕಾಣಿಸುತ್ತಿರುವುದರಿಂದ ಜನರು ಆತಂಕಗೊಂಡಿದ್ದಾರೆ.

ಈ ಹಿನ್ನೆಲೆಯಲ್ಲಿ ತಕ್ಷಣ ಅರಣ್ಯ ಇಲಾಖೆಯವರು ಸ್ಥಳಕ್ಕೆ ಭೇಟಿ ನೀಡಿ ಮೊಸಳೆಯನ್ನು ಸುರಕ್ಷಿತವಾಗಿ ಹಿಡಿದು ಬೇರೆಡೆ ಸ್ಥಳಾಂತರಿಸಬೇಕು ಎಂದು ಕುರಿಗಾಹಿಗಳು ಮತ್ತು ದನ ಕಾಯುವವರು ಒತ್ತಾಯಿಸಿದ್ದಾರೆ. ಸ್ಥಳಕ್ಕೆ ಅರಣ್ಯ ಇಲಾಖೆಯ ಅಧಿಕಾರಿಗಳು ಆಗಮಿಸಿ ಅಗತ್ಯ ಸುರಕ್ಷತಾ ಕ್ರಮಗಳನ್ನು ಕೈಗೊಂಡು ಸಾರ್ವಜನಿಕರಿಗೆ ಭದ್ರತೆ ಒದಗಿಸಬೇಕೆಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

### ಅಡವೀಂದ್ರಸ್ವಾಮಿಮಠದ ಶಿವಾನುಭವದಲ್ಲಿ ಹಾನಗಲ್ಲ ಕುಮಾರಶಿವಯೋಗಿಗಳ ಪುಣ್ಯಸ್ಮರಣೋತ್ಸವ

## ಕಾರಣಿಕ ಯುಗಪುರುಷ ಲಿಂ.ಹಾನಗಲ್ಲ ಶ್ರೀಕುಮಾರೇಶ್ವರರು




■ ವಿಜಯಸಾಕ್ಷಿ ಸುದ್ದಿ, ಗದಗ

ಈ ದೇಶದಲ್ಲಿಯೇ ಅಪರೂಪವೆನ್ನಬಹುದಾದ ಶಿವಯೋಗ ಮಂದಿರವನ್ನು ಸ್ಥಾಪಿಸಿ ಅದನ್ನು ತುಂಬಾ ಕಷ್ಟಪಟ್ಟು ಅಭಿವೃದ್ಧಿಪಡಿಸುವ ಜೊತೆಗೆ, ಹರಿದು ಹಂಚಿ ಹೋಗಿದ್ದ ಸಮಾಜವನ್ನು ಒಂದುಗೂಡಿಸಲು ಅಖಿಲ ಭಾರತ ವೀರಶೈವ ಮಹಾಸಭಾ ಸ್ಥಾಪಿಸಿದ ಕಾರಣಿಕ ಯುಗಪುರುಷ ಲಿಂ.ಹಾನಗಲ್ಲ ಶ್ರೀಕುಮಾರೇಶ್ವರ ಸ್ವಾಮಿಗಳು ಈ ನಾಡು ಕಂಡ ಅಪರೂಪದ ಶಿವಯೋಗಿಗಳಾಗಿದ್ದಾರೆ ಎಂದು ಮುಂಡರಗಿಯ ಹೆಸರಾಂತ ಲೇಖಕಿ, ಚಿಂತಕಿ, ಚೈತನ್ಯ ಶಿಕ್ಷಣ ಸಂಸ್ಥೆಯ ನಿರ್ದೇಶಕರಾದ ವೀಣಾ ಹೇಮಂತಗೌಡ ಪಾಟೀಲ ಹೇಳಿದರು.

ಮುಳುಗುಂದ ನಾಕಾ ಬಳಿಯ ಶ್ರೀಅನ್ನಪೂರ್ಣೇಶ್ವರಿ ಮಂದಿರ ಶ್ರೀಅಡವಿಂದ್ರಸ್ವಾಮಿ ಮಠದ 344ನೇ ಮಾಸಿಕ ಶಿವಾನುಭವ ಹಾಗೂ ಲಿಂಗೈಕ್ಯ ಶ್ರೀಹಾನಗಲ್ ಕುಮಾರಶಿವಯೋಗಿಗಳ ಪುಣ್ಯಸ್ಮರಣೋತ್ಸವ ಸಮಾರಂಭದಲ್ಲಿ ಅವರು 'ಕಾರಣಿಕ ಯುಗಪುರುಷ ಪೂಜ್ಯ ಹಾನಗಲ್ ಶ್ರೀಕುಮಾರೇಶ್ವರರು' ಎಂಬ ವಿಷಯ ಕುರಿತು ಮಾತನಾಡಿದರು.

ಲಿಂ. ಹಾನಗಲ್ಲ ಕುಮಾರ ಶಿವಯೋಗಿಗಳವರು ಧಾರ್ಮಿಕ, ಸಾಮಾಜಿಕ ಕ್ಷೇತ್ರದಲ್ಲಿ ಅಪೂರ್ವವಾದ ಸೇವೆ ಸಲ್ಲಿಸಿದಂತೆಯೇ, ಬಾಗಲಕೋಟೆಯಲ್ಲಿ ಜಿನ್ನಿಂಗ್ ಮಿಲ್ ಸ್ಥಾಪಿಸುವ ಮೂಲಕ ಉದ್ಯೋಗಿಕ ಕ್ಷೇತ್ರದಲ್ಲೂ ಪ್ರಗತಿ ಸಾಧಿಸಿದ್ದರು ಎಂದರು.

ಅಧ್ಯಕ್ಷತೆ ವಹಿಸಿದ್ದ ಶಿವಾನುಭವ ಸಮಿತಿ ಅಧ್ಯಕ್ಷರಾದ ಡಾ. ರಾಜೇಂದ್ರ ಎಸ್.ಗಡಾದ ಮಾತನಾಡಿ, ಲಿಂ. ಪೂಜ್ಯ ಹಾನಗಲ್ಲ ಕುಮಾರೇಶ್ವರ ಶಿವಯೋಗಿಗಳು ತಮ್ಮ 37ನೇ ವಯಸ್ಸಿನಲ್ಲಿ ಸಾಮಾಜಿಕ, ಸಾರ್ವಜನಿಕ ಸೇವೆಗೆ ಪಾದಾರ್ಪಣೆ ಮಾಡಿ ತಮ್ಮ 63ನೇ ವಯಸ್ಸಿನಲ್ಲಿಯೇ ಲಿಂಗೈಕ್ಯರಾದರೂ ಕೂಡ ನೂರಾರು ವರ್ಷಗಳ ಕಾಲ ಮಾಡಬಹುದಾದಷ್ಟು ಕಾರ್ಯಗಳನ್ನು, ಅಲ್ಪಾವಧಿಯಲ್ಲಿ ಈ ನಾಡಿನಲ್ಲಿ ಮಾಡಿದ್ದು ಒಂದು ದಾಖಲೆಯೇ ಸರಿ. ಪ್ರಾತಃಸ್ಮರಣೀಯರಾದ ಅವರನ್ನು ಈ ನಾಡಿನ ಲಿಂಗಾಯತ ವೀರಶೈವ ಮಠಗಳು, ಮಠಾಧೀಶರು ಮತ್ತು ಸಮಾಜ ವರ್ಗದವರು ಎಷ್ಟು ಸ್ಮರಿಸಿದರೂ ಸಾಲದು ಎಂದು ಹೇಳಿದರು.

ಕಾರ್ಯಕ್ರಮದ ಪೂರ್ವದಲ್ಲಿ ಶ್ರೀಹಾನಗಲ್ಲ ಕುಮಾರಶಿವಯೋಗಿಗಳ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅವರ ಸ್ಮರಣೆಯ ಗೀತೆಯೊಂದಿಗೆ ಪುಷ್ಪ ನಮನ ಸಲ್ಲಿಸಲಾಯಿತು. ಮಂಗಲಾ ಯಾನಮಶೆಟ್ಟಿ ಪ್ರಾರ್ಥನೆ ಪ್ರಸ್ತುತಪಡಿಸಿದರು. ಶಿವಾನುಭವ ಸಮಿತಿಯ ಮಾಜಿ ಅಧ್ಯಕ್ಷ ಜಿ.ಎಂ. ಯಾನಮಶೆಟ್ಟಿ ಸ್ವಾಗತಿಸಿ, ಪರಿಚಯಿಸಿದರು. ಕಲಾ ಉಪನ್ಯಾಸಕ ಪ್ರಕಾಶ ಬಂಡಿ ಕಾರ್ಯಕ್ರಮ ನಿರೂಪಿಸಿದರು. ಕೋಶಾಧ್ಯಕ್ಷ ಸಿದ್ದಣ್ಣ ಜವಳಿ ವಂದಿಸಿದರು.

ಇದೇ ಸಂದರ್ಭದಲ್ಲಿ ಹುಟ್ಟುಹಬ್ಬದ ನಿಮಿತ್ತ ಬಸವರಾಜ ಪಲ್ಲೇದ ಹಾಗೂ ಮಾರುತಿ ಅವರನ್ನು ಮತ್ತು ಪ್ರಸಾದ ಸೇವೆಯನ್ನು ವಹಿಸಿಕೊಂಡ ರಿಯಲ್ ಎಸ್ಟೇಟ್ ಉದ್ಯಮಿ ಶ್ರೀನಿವಾಸ್ ಶಂಕರಸಾ ಪವಾರ ದಂಪತಿಗಳನ್ನು ಶ್ರೀಮಠದಿಂದ ಸತ್ಕರಿಸಲಾಯಿತು.

ಕಾರ್ಯಕ್ರಮದಲ್ಲಿ ಪ್ರೊ. ಕೆ.ಎಚ್. ಬೇಲೂರು, ಬಿ.ಎಂ. ಬೆಳೆಯಲಿ, ನಿಂಗಪ್ಪ ಬಳಿಗಾರ, ಎಲ್.ಎಸ್. ನಿಲಗುಂದ, ಗುರಪ್ಪ ನಿಡಗುಂದಿ, ಗೀತಾ ಹೂಗಾರ, ಡಾ. ಎಸ್.ಕೆ. ನಾಲವತ್ತವಾಡಮಠ, ಪ್ರಮೀಳಾದೇವಿ ಬಳಿಗಾರ, ಬಿ.ವಿ. ಸಂಕನೂರ, ವೀರೇಶ್ವರಸ್ವಾಮಿ ಹೊಸಳ್ಳಿಮಠ ಸೇರಿದಂತೆ ಗಣ್ಯರು, ಸದ್ಭಕ್ತರು ಪಾಲ್ಗೊಂಡಿದ್ದರು.

ಸಮಾರಂಭದ ಸಮ್ಮುಖ ವಹಿಸಿದ್ದ ಶ್ರೀಅಡವೀಂದ್ರಸ್ವಾಮಿ ಮಠದ ಧರ್ಮದರ್ಶಿಗಳಾದ ವೇದಮೂರ್ತಿ ಮಹೇಶ್ವರ ಸ್ವಾಮಿಗಳು ಮಾತನಾಡಿ, ಧಾರ್ಮಿಕ, ಶೈಕ್ಷಣಿಕ, ಸಾಮಾಜಿಕ, ಔದ್ಯೋಗಿಕ ಕ್ಷೇತ್ರದಲ್ಲಿ ಹಾನಗಲ್ಲ ಕುಮಾರ ಶಿವಯೋಗಿಗಳವರ ಕೊಡುಗೆ ತುಂಬಾ ಅಪರೂಪವಾಗಿದ್ದು, ಇಂದಿನ ಎಲ್ಲ ಮಠಾಧೀಶರಿಗೆ ಅವರ ಸೇವಾ ಕಾರ್ಯಗಳು ಮಾದರಿಯಾಗಿವೆ ಎಂದರು.

### ಲಕ್ಕುಂಡಿ ಪಾರಂಪರಿಕ ಪ್ರದೇಶಾಭಿವೃದ್ಧಿ ಪ್ರಾಧಿಕಾರದಿಂದ ಕಾರ್ಯಕ್ರಮ

## ಪಂಚ ದೇವಾಲಯ, ಬಾವಿಗಳ ಅನಾವರಣ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಪ್ರವಾಸೋದ್ಯಮ ಇಲಾಖೆ, ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಮೈಸೂರು ಮತ್ತು ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಇವರುಗಳ ಸಹಯೋಗದಲ್ಲಿ ಫೆ. 6ರಂದು ಬೆಳಿಗ್ಗೆ 10.30 ಗಂಟೆಗೆ ಲಕ್ಕುಂಡಿಯ ಚೌಕಿಮಠದ ಆವರಣದ ಲಕ್ಕುಂಡಿ ಪಾರಂಪರಿಕ ಪ್ರದೇಶಾಭಿವೃದ್ಧಿ ಪ್ರಾಧಿಕಾರ ವ್ಯಾಪ್ತಿಯಲ್ಲಿ ಪಂಚ ದೇವಾಲಯಗಳ ಮತ್ತು ಪಂಚ ಬಾವಿಗಳ ಅನಾವರಣ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು.

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಕಾರ್ಯಕ್ರಮವನ್ನು ಅನಾವರಣಗೊಳಿಸಲಿದ್ದಾರೆ. ನರಗುಂದ ಶಾಸಕ ಸಿ.ಸಿ. ಪಾಟೀಲ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕ ಹಾಗೂ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್, ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಹಾವೇರಿ ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸಂಸದ ಪಿ.ಸಿ. ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಶಾಸಕರುಗಳಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಾಧಿಕಾದ ಅಧ್ಯಕ್ಷ ಬಿ.ಬಿ. ಅಸೂಟಿ ಆಗಮಿಸುವರು.

ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ರಾಜ್ಯ ಸಮಿತಿ ಸದಸ್ಯರಾದ ಸಿ.ಜಿ. ಬೆಟಸೂರಮಠ, ಸಿದ್ದಲಿಂಗೇಶ್ವರ ಎಚ್.ಪಾಟೀಲ, ಗೀತಾಂಜಲಿ ರಾವ್, ಅ.ಧ. ಕಟ್ಟಿಮನಿ, ಲಕ್ಕುಂಡಿ ಗ್ರಾಮದ ಗುರು-ಹಿರಿಯರು ಆಗಮಿಸಲಿದ್ದಾರೆ.

ಜಿಲ್ಲಾಧಿಕಾರಿ ಹಾಗೂ ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಆಯುಕ್ತ ದೇವರಾಜು ಎ, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಡಾ. ಶರಣು ಗೋಗೇರಿ, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಕೊಟ್ರೇಶ್ವರ ಯ.ವಿಭೂತಿ ಸರ್ವರಿಗೂ ಸ್ವಾಗತ ಕೋರಿದ್ದಾರೆ.

ವಿಶೇಷ ಆಹ್ವಾನಿತರಾಗಿ ಸರ್ಕಾರದ ಕಾರ್ಯದರ್ಶಿಗಳು, ಪ್ರವಾಸೋದ್ಯಮ ಇಲಾಖೆಯ ಡಾ. ಕೆ.ವಿ. ತ್ರಿಲೋಕಚಂದ್ರ, ಯೋಜನೆ ಕಾರ್ಯಕ್ರಮಗಳು, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಪ್ರವಾಸೋದ್ಯಮ ಇಲಾಖೆ ಆಯುಕ್ತ ಅಕ್ರಂ ಪಾಷಾ, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಜಾನಕಿ ಕೆ.ಎಂ ಆಗಮಿಸಲಿದ್ದಾರೆ.

## ರಿತ್ತಿ ಕುಟುಂಬಕ್ಕೆ ಗದ್ದಿಗೌಡರ್ ಶ್ಲಾಘನೆ, ಕೇಂದ್ರದಿಂದ ಸಹಾಯದ ಭರವಸೆ



■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಲಕ್ಕುಂಡಿಯಲ್ಲಿ ಸಂಸದ ಪಿ.ಸಿ. ಗದ್ದಿಗೌಡರ್ ಮಹತ್ವದ ಹೇಳಿಕೆ ನೀಡಿ, ಐತಿಹಾಸಿಕ ಊರಿನ ಸಂರಕ್ಷಣೆ ಮತ್ತು ಅಭಿವೃದ್ಧಿಗೆ ತಮ್ಮ ಬದ್ಧತೆ ವ್ಯಕ್ತಪಡಿಸಿದ್ದಾರೆ. ಲಕ್ಕುಂಡಿ ಅನೇಕರ ರಾಜಧಾನಿಯಾಗಿದ್ದ ಕಾರಣ, ಭೂಮಿ ಅಗೆಯುವಾಗ ನಗ, ನಾಣ್ಯಗಳು ಹಾಗೂ ಪ್ರಾಚ್ಯಾವಶೇಷಗಳು ಸಿಗುವ ಸಾಧ್ಯತೆ ಇದೆ ಎಂದು ಅವರು ಹೇಳಿದರು.

ಮಣ್ಣಿನ ಪದರಗಳಲ್ಲಿ ಸಿಗುವ ಆಧಾರಗಳ ಮೂಲಕ ಆಯಾ ಕಾಲಘಟ್ಟದ ಇತಿಹಾಸವನ್ನು ಗುರುತಿಸಬಹುದು. ಆದರೆ ಇಂದಿನ ಕಾಲದಲ್ಲಿ ಜನರು ನಿಧಿ ಹುಡುಕಿ ಕಳ್ಳತನ ಮಾಡುವ ಘಟನೆಗಳು ಹೆಚ್ಚಾಗಿವೆ ಎಂದು ಆತಂಕ ವ್ಯಕ್ತಪಡಿಸಿದರು.

ಇಂತಹ ಸಂದರ್ಭದಲ್ಲಿ ರಿತ್ತಿ ಕುಟುಂಬ ಪ್ರಾಮಾಣಿಕತೆಯಿಂದ ಸಿಕ್ಕ ನಿಧಿಯನ್ನು ಸರ್ಕಾರಕ್ಕೆ ಒಪ್ಪಿಸಿರುವುದು ಶ್ಲಾಘನೀಯ ಎಂದು ಗದ್ದಿಗೌಡರ್ ಅಭಿನಂದನೆ ಸಲ್ಲಿಸಿದರು. ಕೇಂದ್ರ ಸರ್ಕಾರದ ವತಿಯಿಂದ ಹಾಗೂ ವೈಯಕ್ತಿಕವಾಗಿ ರಿತ್ತಿ ಕುಟುಂಬಕ್ಕೆ ಸಹಾಯ ಮಾಡಲಾಗುವುದು ಎಂದು ಅವರು ಭರವಸೆ ನೀಡಿದರು. ಲಕ್ಕುಂಡಿಯಂತಹ ಐತಿಹಾಸಿಕ ಸ್ಥಳಗಳನ್ನು ಅಭಿವೃದ್ಧಿಪಡಿಸಲು ಕೇಂದ್ರ ಸರ್ಕಾರದಿಂದ ಹೆಚ್ಚಿನ ಹಣ ಲಭ್ಯವಾಗಲಿದೆ. ಸ್ಮಾರಕಗಳು ಹಾಳಾಗದಂತೆ ಕಾಯ್ದುಕೊಳ್ಳಲು ಹಾಗೂ ರಕ್ಷಣೆ ಮಾಡಲು ಅಗತ್ಯ ವ್ಯವಸ್ಥೆ ಕೈಗೊಳ್ಳಲಾಗುತ್ತದೆ ಎಂದು ತಿಳಿಸಿದರು.

ಲಕ್ಕುಂಡಿ ನನ್ನ ಲೋಕಸಭಾ ಕ್ಷೇತ್ರದ ಅತ್ಯಂತ ಪ್ರಮುಖ ಹಳ್ಳಿ. ಈ ಊರಿನ ಬಗ್ಗೆ ನನಗೆ ವಿಶೇಷ ಗೌರವವಿದೆ. ಲಕ್ಕುಂಡಿಗೆ ವಿಶ್ವ ಪಾರಂಪರಿಕ ಸ್ಥಾನಮಾನ ತರುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮುಂದುವರಿಸುತ್ತೇನೆ ಎಂದು ಸಂಸದರು ಹೇಳಿದರು.

ಈ ಸಂದರ್ಭದಲ್ಲೇ ಸ್ಥಳೀಯರು ಕೋಟೆ ವೀರಭದ್ರೇಶ್ವರ ದೇವರ ಜಾತ್ರೆಗೆ ಯಾವುದೇ ಅಡ್ಡಿಯಾಗದಂತೆ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದರು. ಮಾರ್ಚ್ 30 ಮತ್ತು 31ರಂದು ನಡೆಯುವ ಜಾತ್ರೆಗೆ ಅನುಕೂಲ ಮಾಡಿಕೊಡಬೇಕೆಂದು ಸ್ಥಳೀಯರು ಒತ್ತಾಯಿಸಿದ್ದಾರೆ.

## ಕುಡಿಯುವ ನೀರಿನ ಕೆರೆಗೆ ಭೂಮಿಪೂಜೆ



■ ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ ನಮ್ಮೂರು-ನಮ್ಮ ಕೆರೆ ಕಾರ್ಯಕ್ರಮದಡಿಯಲ್ಲಿ ಗದಗ ತಾಲೂಕಿನ ಹೊಂಬಳ ವಲಯದ ಕದಡಿ ಗ್ರಾಮದ ಸಾರ್ವಜನಿಕ ಕುಡಿಯುವ ನೀರಿನ ಕೆರೆಗೆ ಭೂಮಿಪೂಜೆ ನೆರವೇರಿತು.

ಕಾರ್ಯಕ್ರಮದಲ್ಲಿ ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕ ಕೇಶವ ದೇವಾಂಗ ಮಾತನಾಡಿ, ಯೋಜನಾ ಕಾರ್ಯಕ್ರಮಗಳು ಹಾಗೂ ನಮ್ಮೂರು ನಮ್ಮ ಕೆರೆ ಪ್ರಾರಂಭವಾದ ಬಗ್ಗೆ ಮಾಹಿತಿ ನೀಡಿ, ಕಾಮಗಾರಿ ಸಂದರ್ಭದಲ್ಲಿ ಎದುರಾಗುವ ಸಮಸ್ಯೆಗಳಿಗೆ ಸಮಿತಿಯವರು ನಮ್ಮ ಕಾರ್ಯಕರ್ತರಿಗೆ ಸಹಕಾರ ನೀಡಬೇಕು ಮತ್ತು ಕೆರೆಯ ಸ್ವಚ್ಛತೆ ಕಾಪಾಡುವಂತೆ ಮನವಿ ಮಾಡಿದರು.

ಹಿರಿಯರಾದ ವಿರೂಪಾಕ್ಷಪ್ಪ ಮಾತನಾಡಿ, ಸರ್ಕಾರ ಮಾಡದ ಕೆಲಸಗಳನ್ನು ಧರ್ಮಸ್ಥಳ ಯೋಜನೆ ಮಾಡಿಕೊಂಡು ಬಂದಿದೆ. ಸಮಾಜ ಸೇವೆಯನ್ನು ತಮ್ಮ ಉಸಿರಾಗಿ ಮಾಡಿಕೊಂಡಿರುವ ಪೂಜ್ಯ ಹೆಗ್ಗಡೆ ದಂಪತಿಗಳಿಗೆ ನಮ್ಮ ನಮನಗಳು ಎಂದರು.

ಕೆರೆ ಸಮಿತಿ ಅಧ್ಯಕ್ಷರಾದ ರುದ್ರಪ್ಪ ಗಾರವಾಡ ಮಾತನಾಡಿ, ಕೆರೆ ಕಾಮಗಾರಿ ನಮ್ಮೂರಿಗೆ ಬಂದಿರುವುದು ನಮ್ಮ ಭಾಗ್ಯ. ಅದರಲ್ಲೂ ಸಮಿತಿಯ ಅಧ್ಯಕ್ಷತೆ ಸಿಕ್ಕಿರುವುದು ನನ್ನ ಪುಣ್ಯ ಎಂದರು.

ಕೆರೆ ಸಮಿತಿ ಉಪಾಧ್ಯಕ್ಷ ಶಿವಾನಂದ ಮರಗೋಳ ಮಾತನಾಡಿ, ಈ ಕೆಲಸದಲ್ಲಿ ಯಾವುದೇ ರಾಜಕೀಯ ಬಣಗಳು ಪ್ರವೇಶಿಸದೆ ಜಾತಿ, ಕುಲ, ಧರ್ಮ ನೋಡದೆ ಒಟ್ಟಾಗಿ ಎಲ್ಲರೂ ಸೇವೆ ಸಲ್ಲಿಸೋಣ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕೊಪ್ಪಳ ಪ್ರಾದೇಶಿಕ ಕೆರೆ ಅಭಿಯಂತರರಾದ ಸತೀಶ, ತಾಲೂಕಾ ಕ್ಷೇತ್ರ ಯೋಜನಾಧಿಕಾರಿ ಉಮಾ, ಕೃಷಿ ಮೇಲ್ವಿಚಾರಕ ಕಿರಣ ಮಹೇಂದ್ರಕರ, ವಲಯದ ಮೇಲ್ವಿಚಾರಕ ಮಲ್ಲಿಕಾರ್ಜುನ ಗೌಡ್ರು, ಪಂಚಾಯತ್ ಅಧ್ಯಕ್ಷೆ ಕವಿತಾ ಕೋಣಿಮನಿ, ಒಕ್ಕೂಟದ ಅಧ್ಯಕ್ಷೆ ಅನ್ನಪೂರ್ಣ ನಾಯ್ಕ್, ಹಿರಿಯರಾದ ಪರಶುರಾಮ ಸೇರಿದಂತೆ ನವಜೀವನ ಸಮಿತಿ ಸದ್ಯಸರು, ಗ್ರಾ.ಪಂ ಅಧ್ಯಕ್ಷರು ಹಾಗೂ ಸದ್ಯಸರು, ಕೆರೆ ಸಮಿತಿ ಸದ್ಯಸರು, ಸ್ವ-ಸಹಾಯ ಸಂಘದ ಸದ್ಯಸರು ಇದ್ದರು.

## ಗಾಯಾಳುಗಳಿಗೆ ಸಾಂತ್ವನ ಹೇಳಿದ ಮಿಥುನ್ ಪಾಟೀಲ

■ ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಿನ ಜಿಗಳೂರ ಗ್ರಾಮದ ಬಳಿ ಕ್ಯಾಂಟರ್ ಹಾಗೂ ಕ್ರೂಸರ್ ನಡುವೆ ಅಪಘಾತ ಸಂಭವಿಸಿ ಮೂರು ಮಹಿಳೆಯರು ಪ್ರಾಣ ಕಳೆದುಕೊಂಡಿರುವ ಸುದ್ದಿಯನ್ನು ತಿಳಿದ ತಾಲೂಕಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ ಆಸ್ಪತ್ರೆಗೆ ಧಾವಿಸಿ ಮೃತರ ಕುಟುಂಬಸ್ಥರಿಗೆ ಹಾಗೂ ಗಾಯಾಳುಗಳಿಗೆ ಸಾಂತ್ವನ ಹೇಳಿದರು.

ದೂರವಾಣಿ ಮೂಲಕ ಹಿರಿಯ ವೈದ್ಯರುಗಳನ್ನು ಸಂಪರ್ಕಿಸಿ ಬೇಗನೆ ಆಸ್ಪತ್ರೆಗೆ ಬರುವಂತೆ ಸೂಚನೆ ನೀಡಿದರು. ಗಾಯಾಳುಗಳಿಗೆ ಸೂಕ್ತ ಚಿಕಿತ್ಸೆ ನೀಡುವಂತೆ ವೈದ್ಯಾಧಿಕಾರಿಗಳಿಗೆ ತಿಳಿಸಿದರಲ್ಲದೆ, ಜಿಲ್ಲಾಸ್ಪತ್ರೆಗೆ ದಾಖಲಾಗಿದ್ದ ಗಾಯಾಳುಗಳ ಸ್ಥಿತಿಗತಿಗಳ ಬಗ್ಗೆ ಮಾಹಿತಿ ಪಡೆದುಕೊಂಡರು.

ಸುಮಾರು ಎರಡು ಗಂಟೆಗಳ ಕಾಲ ಆಸ್ಪತ್ರೆ ಆವರಣದಲ್ಲಿಯೇ ಕಳೆದು ಮೃತಪಟ್ಟವರ ಮತ್ತು ಗಾಯಗೊಂಡವರ ಕುಟುಂಬಗಳಿಗೆ ಆತ್ಮಸ್ಥೈರ್ಯ ತುಂಬಿದರು.

ಸಿದ್ದಣ್ಣ ಬಂಡಿ, ಹಸನ್‌ಸಾಬ ತಟಗಾರ, ಶಿವರಾಜ ಘೋರ್ಪಡೆ, ಅಸ್ಲಂ ಕೊಪ್ಪಳ, ಯಲ್ಲಪ್ಪ ಕಿರೇಸೂರ ಮುಂತಾದವರು ಜೊತೆಗಿದ್ದರು.



## ಬಿಹಾರ ಚುನಾವಣೆಯಲ್ಲಿ ಅಕ್ರಮ ಆರೋಪಿಸಿ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ ಜನ್ ಸುರಾಜ್ ಪಕ್ಷ : ಹೊಸದಾಗಿ ಚುನಾವಣೆ ನಡೆಸುವಂತೆ ಮನವಿ

■ ವಿಜಯಸಾಕ್ಷಿ ಸುದ್ದಿ, ಬಿಹಾರ

ಪ್ರಶಾಂತ್ ಕಿಶೋರ್ ನೇತೃತ್ವದ ಜನ್ ಸುರಾಜ್ ಪಕ್ಷವು 2025ರ ಬಿಹಾರ ವಿಧಾನಸಭಾ ಚುನಾವಣೆಯನ್ನು ಪ್ರಶ್ನಿಸಿ ಗುರುವಾರ (ಫೆ.5) ಸುಪ್ರೀಂ ಕೋರ್ಟ್‌ಗೆ ರಿಟ್ ಅರ್ಜಿ ಸಲ್ಲಿಸಿದೆ ಎಂದು ವರದಿಯಾಗಿದೆ. ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ವ್ಯಾಪಕ ಅಕ್ರಮಗಳು ಮತ್ತು ಕಾನೂನುಬಾಹಿರ ಚಟುವಟಿಕೆಗಳು ನಡೆದಿವೆ ಎಂದು ಪಕ್ಷವು ಗಂಭೀರ ಆರೋಪ ಮಾಡಿದೆ. ಚುನಾವಣಾ ಪ್ರಕ್ರಿಯೆಯ ಪಾರದರ್ಶಕತೆ ಮತ್ತು ನೈತಿಕತೆಯ ಬಗ್ಗೆ ಆತಂಕ ವ್ಯಕ್ತಪಡಿಸಿ, ಫಲಿತಾಂಶಗಳನ್ನು ಅಸಿಂಧುಗೊಳಿಸಿ, ರಾಜ್ಯದಲ್ಲಿ ಮತ್ತೊಮ್ಮೆ ಹೊಸದಾಗಿ ಚುನಾವಣೆ ನಡೆಸಬೇಕೆಂದು ಮನವಿ ಮಾಡಿದೆ. ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿದ್ದಾಗ, ರಾಜ್ಯದ ಸುಮಾರು 25 ರಿಂದ 35 ಲಕ್ಷ ಮಹಿಳಾ ಮತದಾರರಿಗೆ ತಲಾ 10,000 ರೂಪಾಯಿಗಳನ್ನು ನೇರವಾಗಿ ಬ್ಯಾಂಕ್ ಖಾತೆಗೆ ವರ್ಗಾವಣೆ ಮಾಡಲಾಗಿದೆ. 'ಮುಖ್ಯಮಂತ್ರಿ ಮಹಿಳಾ ರೋಜಗಾರ್ ಯೋಜನೆ'ಯ ಅಡಿಯಲ್ಲಿ ಈ ಹಣವನ್ನು ಹಂಚಲಾಗಿದ್ದು, ಚುನಾವಣೆ ಘೋಷಣೆಯಾದ ನಂತರವೇ ಹೊಸ ಫಲಾನುಭವಿಗಳನ್ನು ಈ ಯೋಜನೆಗೆ ಸೇರ್ಪಡಿಸಲಾಗಿದೆ.

## ಮಕ್ಕಳ ವಿಷಯವಾರು ದೌರ್ಬಲ್ಯಗಳನ್ನು ವಿಶ್ಲೇಷಿಸಿ

▶▶ ಮೊದಲನೇ ಪುಟದಿಂದ

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರುಡಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿ, ಕಾರ್ಯಾಗಾರದ ಉದ್ದೇಶವನ್ನು ವಿವರಿಸಿದರು.

ಈ ಸಂದರ್ಭದಲ್ಲಿ ಶಾಲಾ ಶಿಕ್ಷಣ ಇಲಾಖೆ (ಧಾರವಾಡ) ಅಪರ ಆಯುಕ್ತರ ಕಚೇರಿ ನಿರ್ದೇಶಕರಾದ ಈಶ್ವರ ನಾಯಕ, ಡಯಟ್ ಪ್ರಾಚಾರ್ಯ ಜಿ.ಎಂ. ಮುಂದಿನಮನಿ, ಅಕ್ಷರ ದಾಸೋಹದ ಸಹಾಯಕ ನಿರ್ದೇಶಕರು, ಸಮನ್ವಯಾಧಿಕಾರಿಗಳು, ಡಯಟ್ ಉಪನ್ಯಾಸಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಪ್ರೌಢಶಾಲಾ ಮುಖ್ಯ ಶಿಕ್ಷಕರುಗಳು, ನೋಡಲ್ ಅಧಿಕಾರಿಗಳು ಹಾಜರಿದ್ದರು.

ಸಂವಾದದಲ್ಲಿ ಶಿಕ್ಷಣ ಇಲಾಖೆಯ ಅಧಿಕಾರಿಗಳು ಹಾಗೂ ಜಿಲ್ಲೆಯ ವಿವಿಧ ಶಾಲೆಗಳ ಮುಖ್ಯ ಶಿಕ್ಷಕರು ಪಾಲ್ಗೊಂಡಿದ್ದರು.

## ಆಸಕ್ತ ವಿದ್ಯಾರ್ಥಿಗಳಿಗೆ ಸುವರ್ಣಾವಕಾಶ

■ ವಿಜಯಸಾಕ್ಷಿ ಸುದ್ದಿ, ಗದಗ

ಶಹರದ ಕೆ.ಎಲ್.ಇ ಸಂಸ್ಥೆಯ ಎಸ್.ಎ. ಮಾನ್ವಿ ಕಾನೂನು ಮಹಾವಿದ್ಯಾಲಯದಲ್ಲಿ 5 ವರ್ಷಗಳ ಬಿ.ಕಾಂ., ಎಲ್.ಎಲ್.ಬಿ ಕಾನೂನು ಪದವಿ ಪ್ರಾರಂಭವಾಗಿದ್ದು, ಪ್ರವೇಶ ಬಯಸುವ ಆಸಕ್ತ ವಿದ್ಯಾರ್ಥಿಗಳಿಗೆ ಸುವರ್ಣ ಅವಕಾಶ ಲಭ್ಯವಿದೆ.

ಕೆ.ಎಲ್.ಇ ಸಂಸ್ಥೆಯ ಎಸ್.ಎ. ಮಾನ್ವಿ ಕಾನೂನು ಮಹಾವಿದ್ಯಾಲಯವು 1974ರಲ್ಲಿ ಸ್ಥಾಪನೆಯಾಗಿದ್ದು, ಕಳೆದ 52 ವರ್ಷಗಳಿಂದ ಗದಗ ಜಿಲ್ಲೆ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಗುಣಮಟ್ಟದ ಕಾನೂನು ಶಿಕ್ಷಣವನ್ನು ಪಡೆಯಲು ಬಯಸುವ ಯುವ ವಿದ್ಯಾರ್ಥಿಗಳ ಅಗತ್ಯಗಳನ್ನು ಪೂರೈಸುತ್ತಿದೆ.

ಮಹಾವಿದ್ಯಾಲಯವು 3 ವರ್ಷಗಳ ಎಲ್.ಎಲ್.ಬಿ ಕಾನೂನು ಪದವಿಯ ಜೊತೆಗೆ 2026-27ನೇ ಶೈಕ್ಷಣಿಕ ವರ್ಷಕ್ಕೆ 5 ವರ್ಷಗಳ ಬಿ.ಕಾಂ.-ಎಲ್.ಎಲ್.ಬಿ. ಕಾನೂನು ಪದವಿಯನ್ನು ಪ್ರಾರಂಭಿಸುತ್ತಿದೆ.

ಕಾನೂನು ಮಹಾ ವಿದ್ಯಾಲಯವು ಬಾರ್ ಕೌನ್ಸಿಲ್ ಆಫ್ ಇಂಡಿಯಾ, ನವದೆಹಲಿಯಿಂದ 5 ಅವರ್ಷಗಳ ಬಿ.ಕಾಂ.-ಎಲ್.ಎಲ್.ಬಿ ಕಾನೂನು ಪದವಿ ಪ್ರಾರಂಭಿಸಲು ಅನುಮತಿ ಪಡೆದಿದ್ದು, ದ್ವಿತೀಯ ಪಿ.ಯು.ಸಿಯಲ್ಲಿ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ವಿಭಾಗಗಳಲ್ಲಿ ಕನಿಷ್ಠ ಶೇ. 45ರಷ್ಟು ಅಂಕಗಳೊಂದಿಗೆ ಉತ್ತೀರ್ಣರಾದ ವಿದ್ಯಾರ್ಥಿಗಳು ಪ್ರವೇಶ ಪಡೆಯಲು ಅರ್ಹರಾಗಿರುತ್ತಾರೆ. ಕಾನೂನು ಕ್ಷೇತ್ರದಲ್ಲಿರುವ ವಿವಿಧ ಅವಕಾಶಗಳಾದ ವಕೀಲ ವೃತ್ತಿ, ನ್ಯಾಯಾಂಗ ಇಲಾಖೆಯಲ್ಲಿ ನ್ಯಾಯಾಧೀಶರಾಗುವ ಸದಾವಕಾಶ, ಕಾನೂನು ಸಲಹೆಗಾರರಾಗುವ, ತೆರಿಗೆ ಸಲಹೆಗಾರರಾಗುವ, ಕಾನೂನು ಉಪನ್ಯಾಸಕರಾಗುವ ಅವಕಾಶಗಳಿದ್ದು, ವಿದ್ಯಾರ್ಥಿಗಳು ಸದುಪಯೋಗಪಡಿಸಿಕೊಳ್ಳಲು ಪ್ರಾಚಾರ್ಯರಾದ ಡಾ. ಸಂಜೀವ ಎಮ್.ಹುಲ್ಲೂರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



# ಸಾಲದ ಬಾಧೆಯಿಂದ ಮನನೊಂದು ರೈತ ವಿಷ ಸೇವಿಸಿ ಆತ್ಮಹತ್ಯೆ..!



■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಸಾಲದ ಬಾಧೆಯಿಂದ ಮನನೊಂದು ರೈತ ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ತಾಲೂಕಿನ ನೆಲ್ಕುದ್ರಿ 2ನೇ ಕಾಲೋನಿಯಲ್ಲಿ ನಡೆದಿದೆ. ಮೃತರನ್ನು ಎಸ್. ಶರೀಫ್ ವಲಿ (48) ಎಂದು ಗುರುತಿಸಲಾಗಿದೆ.

ಮೃತ ಶರೀಫ್ ವಲಿ ಸುಮಾರು 3 ಎಕರೆ ಕೃಷಿ ಭೂಮಿಯನ್ನು ಹೊಂದಿದ್ದು, ನೀರಾವರಿ ನಿರೀಕ್ಷೆಯೊಂದಿಗೆ ಹತ್ತಾರು ಬೆಳೆಗಳನ್ನು ಬೆಳೆದಿದ್ದರು. ಆದರೆ ನಿರೀಕ್ಷಿತ ಪ್ರಮಾಣದಲ್ಲಿ ನೀರು ಪೂರೈಕೆಯಾಗದೇ, ಬೆಳೆದ ಬೆಳೆಗೆ ಸಮರ್ಪಕ ಬೆಲೆ ಸಿಗದ ಹಿನ್ನೆಲೆಯಲ್ಲಿ ತೀವ್ರ ಆರ್ಥಿಕ ಸಂಕಷ್ಟಕ್ಕೆ ಒಳಗಾಗಿದ್ದರು.

ಮೆಕ್ಕೆಜೋಳ, ಈರುಳ್ಳಿ ಸೇರಿದಂತೆ ವಿವಿಧ ಬೆಳೆಗಳನ್ನು ಬೆಳೆದಿದ್ದರೂ ಮಾರುಕಟ್ಟೆಯಲ್ಲಿ ಉತ್ತಮ ಬೆಲೆ ಲಭಿಸದೆ ಅವರು ನಿರಂತರ ಚಿಂತೆಯಲ್ಲಿದ್ದರು. ಇದಲ್ಲದೆ, ಗ್ರಾಮೀಣ ಬ್ಯಾಂಕಿನಲ್ಲಿ ಸುಮಾರು 3 ಲಕ್ಷ ರೂ. ಸಾಲ ಹಾಗೂ ಕೈಗಡ ಸಾಲವೂ ಮಾಡಿದ್ದರು.

ಈ ಹಿನ್ನೆಲೆಯಲ್ಲಿ ಮನನೊಂದು ಬುಧವಾರ ಸಂಜೆ ತಮ್ಮದೇ ಹೊಲದಲ್ಲಿ ಶರೀಫ್ ವಲಿ ಕ್ರಿಮಿನಾಶಕ ಸೇವಿಸಿದ್ದಾರೆ. ಗಂಭೀರ ಸ್ಥಿತಿಯಲ್ಲಿ ಅವರನ್ನು ತಕ್ಷಣ ಹಗರಿಬೊಮ್ಮನಹಳ್ಳಿ ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿದ್ರು ಕೂಡ ಆಗಲೇ ಅವರು ಮೃತಪಟ್ಟಿದ್ದಾರೆ ಎಂದು ವೈದ್ಯರು ದೃಢಪಡಿಸಿದ್ದಾರೆ.

ಈ ಘಟನೆ ಇಟಗಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದ್ದು, ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ಮುಂದುವರೆಸಿದ್ದಾರೆ.

**ಗೋಗೇರಿ ಗ್ರಾಮದಲ್ಲಿ ಸಂಜೀವಿನಿ ಒಕ್ಕೂಟದ ಮಾಸಿಕ ಸಂತೆಗೆ ಚಾಲನೆ ನೀಡಿದ ಬಸವರಾಜ ಬಡಿಗೇರ**

# ಮಹಿಳಾ ಸ್ವಾವಲಂಬನೆಗೆ ಮಾಸಿಕ ಸಂತೆ ಸಹಕಾರಿ



■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಮಹಿಳೆಯರು ಆರ್ಥಿಕವಾಗಿ ಸದೃಢರಾಗುವ ಮೂಲಕ ಸ್ವಾವಲಾಂಬಿಗಳಾಗಲು ಮಹಿಳೆಯರೇ ತಯಾರಿಸುವ ಹಾಗೂ ಸಿದ್ಧಪಡಿಸುವ ಉತ್ಪನ್ನಗಳ ಮಾರಾಟಕ್ಕೆ ಮಾಸಿಕ ಸಂತೆ ಸಹಕಾರಿಯಾಗಿದೆ ಎಂದು ತಾಲೂಕು ಪಂಚಾಯಿತಿ ಪಂ. ರಾಜ್ ಇಲಾಖೆಯ ಸಹಾಯಕ ನಿರ್ದೇಶಕ ಬಸವರಾಜ ಬಡಿಗೇರ ಹೇಳಿದರು.

ತಾಲೂಕಿನ ಗೋಗೇರಿ ಗ್ರಾಮದಲ್ಲಿ ಗುರುವಾರ ನಡೆದ ಸಂಜೀವಿನಿ ಒಕ್ಕೂಟದ ಮಾಸಿಕ ಸಂತೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಾಸಿಕ ಸಂತೆ ಆಯೋಜನೆ ಮಾಡುವುದರಿಂದ ಇಲ್ಲಿ ಮಹಿಳೆಯರು ತಯಾರಿಸುವ ತಿಂಡಿ-ತಿನಿಸುಗಳು, ಉತ್ಪನ್ನಗಳನ್ನು ಮಾರಾಟ ಮಾಡಲು ಸಾಧ್ಯವಾಗುತ್ತದೆ. ಇದರಿಂದ ಮಹಿಳೆಯರೂ ಆರ್ಥಿಕವಾಗಿ ಬೆಳೆಯಲು ಸಹಕಾರಿಯಾಗಲಿದೆ ಎಂದು ತಿಳಿಸಿದರು.

ಸ್ಥಳೀಯ ಸಂಪನ್ಮೂಲಗಳನ್ನು ಬಳಕೆ ಮಾಡಿ ಗುಣಮಟ್ಟಧ ವಸ್ತುಗಳನ್ನು ಸಿದ್ಧಪಡಿಸಿ ಮಾರಾಟ ಮಾಡಿದರೆ ಎಲ್ಲಾ ವಸ್ತುಗಳು ಕೂಡಾ ಮಾರಾಟವಾಗುತ್ತವೆ. ಆ ನಿಟ್ಟಿನಲ್ಲಿ ಸ್ವ-ಸಹಾಯ ಸಂಘಗಳ ಸದಸ್ಯರು ವಸ್ತುಗಳನ್ನು ತಯಾರಿಸಬೇಕು. ಯಾವುದೇ ವ್ಯಾಪಾರ ಪ್ರಾರಂಭಿಸಬೇಕಾದರೆ ಮೊದಲು ಕಷ್ಟವಾಗುತ್ತದೆ. ಯಾವುದೇ ಲಾಭದ ನಿರೀಕ್ಷೆ ಇರುವುದಿಲ್ಲ. ನಿಮ್ಮ ವಸ್ತುಗಳ ಗುಣಮಟ್ಟ ಹಾಗೂ ಯೋಗ್ಯ ವಸ್ತುಗಳ ಮೇಲೆ ವ್ಯಾಪಾರ ಮಾಡಬೇಕು. ನಂತರ ದಿನಗಳಲ್ಲಿ ನಿಮ್ಮ ವಸ್ತುಗಳಿಗೆ ಬೆಲೆ ಸಿಗುತ್ತದೆ. ಪ್ರಾರಂಭದಲ್ಲಿ ಮಾರುಕಟ್ಟೆಗೆ ವಸ್ತುಗಳನ್ನು ಕಳಿಸಿ, ಜನರು ಆಕರ್ಷಿಸಿ. ಅಂದಾಗ ಮಾತ್ರ ಮಾರುಕಟ್ಟೆಯಲ್ಲಿ ನಿಮ್ಮ ವಸ್ತುಗಳಿಗೆ ಬೆಲೆ ಬರುತ್ತದೆ ಎಂದು ಸಲಹೆ ನೀಡಿದರು.

ಗ್ರಾಮದ ಮುಖಂಡರಾದ ಕೆ.ಕೆ. ಭಗವಾನ್, ಎಂ.ಕೆ. ಬಾದಾಮಿ, ಕೆ.ಎಸ್. ಕೊಡತಗೇರಿ ಮಾತನಾಡಿ, ಗೋಗೇರಿ ಗ್ರಾಮದಲ್ಲಿ ಸಂಜೀವಿನಿ ಒಕ್ಕೂಟದಿಂದ ಮಾಸಿಕ ಸಂತೆ ನಡೆಯುತ್ತಿರುವುದು ಖುಷಿಯ ವಿಚಾರ. ಈ ಗ್ರಾಮದ ಸ್ವ-ಸಹಾಯ ಸಂಘಗಳ ಮಹಿಳಾ ಸದಸ್ಯರು ಹೊಸ ಹೊಸ ಉತ್ಪನ್ನಗಳನ್ನು ತಯಾರಿಸಿ ಮಾರುಕಟ್ಟೆಗೆ ಒದಗಿಸಿದರೆ ಒಳ್ಳೆಯ ಆದಾಯ ಬರಲಿದೆ.

ಮಹಿಳೆಯರು ಆರ್ಥಿಕವಾಗಿ ಸಬಲರಾಗುತ್ತಾರೆ. ಈ ಮಾಸಿಕ ಸಂತೆ ನಗರ ಮತ್ತು ಪಟ್ಟಣ ಪ್ರದೇಶಗಳಲ್ಲಿ ಮಾತ್ರ ನೋಡುತ್ತಿದ್ದೆವು. ಈಗ ಗ್ರಾಮೀಣ ಪ್ರದೇಶದಲ್ಲಿಯೂ ಅದರಲ್ಲೂ ಗ್ರಾಮೀಣ ಪ್ರದೇಶದ ಮಹಿಳೆಯರೇ ಮಾರುಕಟ್ಟೆ ಮಾಡುತ್ತಿರುವುದು ಸಂತಸ ತಂದಿದೆ ಎಂದು ಹೇಳಿದರು. ಎನ್.ಆರ್.ಎಲ್.ಎಂ ಘಟಕದ ತಾಲೂಕು ಕಾರ್ಯಕ್ರಮ ವ್ಯವಸ್ಥಾಪಕ (ಟಿಪಿಎಂ) ವೀರೇಶ ಬಳಿಗೇರ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಗ್ರಾಮದ ಮುಖಂಡರಾದ ಬಸಪ್ಪ ಕೆರಿ, ಇಮಾಮಸಾಬ ಭಗವಾನ, ಕಾರ್ಯಕ್ರಮದಲ್ಲಿ ಎಲ್ಲಾ ಒಕ್ಕೂಟಗಳ ಸಿಬ್ಬಂದಿಗಳಾದ ಎಂ.ಬಿ.ಕೆ, ಎಲ್.ಸಿ.ಆರ್.ಪಿ, ಕೃಷಿ ಸಖಿ, ಪಶು ಸಖಿ, ಗ್ರಾಮ ಪಂಚಾಯಿತಿ ಸಿಬ್ಬಂದಿ ಹಾಗೂ ಮಹಿಳಾ ಸ್ವ-ಸಹಾಯ ಸಂಘದ ಸದಸ್ಯರು ಭಾಗವಹಿಸಿದ್ದರು. ತಾಲೂಕು ಮಟ್ಟದ ಕೃಷಿಯೇತರ ಜೀವನೋಪಾಯದ ಮೇಲ್ವಿಚಾರಕ ಅನಿಲಕುಮಾರ ಕೆ ಅವರು ನಿರೂಪಿಸಿ, ವಂದಿಸಿದರು.

> ಸಂಜೀವಿನಿ ಸಂಘದ ಉತ್ಪನ್ನವು ಮಾರುಕಟ್ಟೆಯಲ್ಲಿ ಗುರುತಿಸಿಕೊಳ್ಳುವಂತೆ ಮಾಡಲು ಅದರಲ್ಲಿ ವಿಭಿನ್ನತೆಯಿರಬೇಕು, ಉತ್ಪನ್ನದ ಗುಣಮಟ್ಟ ಮತ್ತು ಅದನ್ನು ಗ್ರಾಹಕರಿಗೆ ನೀಡುವಾಗ ಉತ್ತಮ ಪ್ಯಾಕೆಜಿಂಗ್ ಹೊಂದಿರಬೇಕು. ಆಗ ಮಾತ್ರ ಉತ್ಪನ್ನಗಳು ಜನರನ್ನು ತಲುಪುತ್ತವೆ. ಮಾರುಕಟ್ಟೆಯಲ್ಲಿ ಸ್ಪರ್ಧಾತ್ಮಕ ಬೆಲೆ ನಿಗದಿಪಡಿಸಿದಾಗ ಮಾತ್ರ ಹೆಚ್ಚಿನ ವಸ್ತುಗಳು ಮಾರಾಟವಾಗುತ್ತವೆ ಎಂದು ಬಸವರಾಜ ಬಡಿಗೇರ ಹೇಳಿದರು.

# ಪೊಲೀಸರೆಂದರೆ ಭಯ ಬೇಡ




■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಪೊಲೀಸ್ ಠಾಣೆ ವ್ಯಾಪ್ತಿಯ ಪ್ರಮುಖ ರಸ್ತೆಗಳಲ್ಲಿ ಸಿಪಿಐ ಬಿ.ವಿ. ನ್ಯಾಮಗೌಡ್ರ ಮತ್ತು ಪಿಎಸ್‌ಐ ನಾಗರಾಜ ಗಡದ ನೇತೃತ್ವದಲ್ಲಿ ಆರ್‌ಎಎಫ್-97 ಬಟಾಲಿಯನ್ ತುಕಡಿ ರೂಟ್ ಮಾರ್ಚ್ ನಡೆಸಿ ಸಾರ್ವಜನಿಕರ ಗಮನ ಸೆಳೆದರು.

ರೂಟ್‌ಮಾರ್ಚ್ ನೆರವೇರಿದ ನಂತರ ಪೊಲೀಸ್ ಠಾಣೆಯಲ್ಲಿ ಸಿಪಿಐ ಬಿ.ವಿ. ನ್ಯಾಮಗೌಡ ಮಾತನಾಡಿ, ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಸಾರ್ವಜನಿಕರಲ್ಲಿ ಜಾಗೃತಿ ಮತ್ತು ಅರಿವು ಮೂಡಿಸಲು ಶಿವಮೊಗ್ಗದ ಆರ್.ಎ.ಎಫ್-97 ಬಟಾಲಿಯನ್ ಅವರ 36 ಜನರ ತಂಡದಿಂದ ರೂಟ್ ಮಾರ್ಚ್ ನಡೆಸಲಾಗಿದೆ. ಸಾರ್ವಜನಿಕರಲ್ಲಿ ಪೊಲೀಸರೆಂದರೆ ಸಾಮಾನ್ಯವಾಗಿ ಭಯ, ಹಿಂಜರಿಕೆ ಸಹಜ. ಭಯ ಬಿಟ್ಟು ಧೈರ್ಯವಾಗಿ ಪೊಲೀಸರೊಂದಿಗೆ ಉತ್ತಮ ಸ್ನೇಹವನ್ನು ಬೆಳೆಸಿಕೊಳ್ಳಿ. ಯಾವುದೆ ಅಪರಾಧ ಘಟನೆಗಳು ನಡೆದಾಗ ಪೊಲೀಸರಿಗೆ ಧೈರ್ಯದಿಂದ ಮಾಹಿತಿ ಕೊಡಿ. ರೂಟ್ ಮಾರ್ಚ್‌ನಿಂದ ಸಾರ್ವಜನಿಕರ ಭಯವನ್ನು ಹೋಗಲಾಡಿಸಲು ಸಹಾಯವಾಗುತ್ತದೆ.

ಎಲ್ಲಿಯೇ ಕಾನೂನು ಸುವ್ಯವಸ್ಥೆ ಹದಗೆಟ್ಟ ಸಂದರ್ಭದಲ್ಲಿ ಈ ತಂಡದವರು ಸಾರ್ವಜನಿಕ ರಕ್ಷಣೆಗೆ ಧಾವಿಸುತ್ತಾರೆ. ಸಾರ್ವಜನಿಕರ ರಕ್ಷಣೆಗೆ ಪೊಲೀಸ್ ಇಲಾಖೆಯ ಸನ್ನದ್ಧವಾಗಿರುತ್ತದೆ ಎಂದು ಹೇಳಿದರು.

ಪಿಎಸ್‌ಐ ನಾಗರಾಜ ಗಡದ ಮಾತನಾಡಿ, ಸಾರ್ವಜನಿಕರು ಪಟ್ಟಣ ಹಾಗೂ ಗ್ರಾಮೀಣ ಬಾಗದಲ್ಲಿ ಎಲ್ಲೇ ಅಪರಾಧ ಚಟುವಟಿಕೆಗಳು ಕಂಡು ಬಂದರೂ ಪೊಲೀಸ್ ಠಾಣೆಗೆ ತಿಳಿಸಬೇಕು. ಸಾರ್ವಜನಿಕರು ಪೊಲೀಸರೊಂದಿಗೆ ಕೈಜೋಡಿಸಿದಾಗ ಸಮಾಜಘಾತುಕ ಚಟುವಟಿಕೆಗಳನ್ನು ಪ್ರಾರಂಭಿಕ ಹಂತದಲ್ಲಿ ತಡೆಗಟ್ಟಬಹುದು ಎಂದು ಹೇಳಿದರು.

ದೂದನಾನಾ ದರ್ಗಾದಿಂದ ಪ್ರಾರಂಭಗೊಂಡ ರೂಟ್‌ಮಾರ್ಚ್ ಹಾವಳಿ ಆಂಜನೇಯ ದೇವಸ್ಥಾನ, ಬಜಾರ ರಸ್ತೆ, ಪಾದಗಟ್ಟಿ, ಸೋಮೇಶ್ವರ ದೇವಸ್ಥಾನ, ತೆರಿನಮನೆ, ಆದಯ್ಯ ಸರ್ಕಲ್, ಗದಗ ನಾಕಾ, ಹೊಸ ಬಸ್ ಸ್ಟಾಂಡ್, ಶಿಗ್ಲಿ ನಾಕಾದಿಂದ ಪೊಲೀಸ್ ಠಾಣೆಗೆ ಮುಕ್ತಾಯಗೊಂಡಿತು. ಈ ಸಂದರ್ಭದಲ್ಲಿ ಆರ್.ಎ.ಎಫ್ ಬಟಾಲಿಯನ ಅಸಿಸ್ಟೆಂಟ್ ಕಮಾಂಡೆಂಟ್ ಅನಿಲಕುಮಾರ ಜಾಧವ, ಆರ್‌ಎಎಫ್ ಸಿಬ್ಬಂದಿಗಳು, ಲಕ್ಷ್ಮೇಶ್ವರ ಪೊಲೀಸ್ ಠಾಣೆಯ ಸಿಬ್ಬಂದಿಗಳು ಇದ್ದರು.

# ರಾಜ್ಯ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿಗಾಗಿ ಅರ್ಜಿ ಅಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2026ನೇ ಸಾಲಿನಲ್ಲಿ ರಾಜ್ಯ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿ ಪಡೆಯಲು ರಾಜ್ಯ ಸರ್ಕಾರದ ಅಧಿಕಾರಿ ಮತ್ತು ನೌಕರರು ತಮ್ಮ ನಾಮ ನಿರ್ದೇಶನಗಳನ್ನು ಕಡ್ಡಯವಾಗಿ ಆನ್ ಲೈನ್ ಮೂಲಕ ಸಲ್ಲಿಸಲು ಅವಕಾಶ ಕಲ್ಪಿಸಿಲಾಗಿದೆ.

ಸರ್ವೋತ್ತಮ ಸೇವಾ ಪ್ರಶಸ್ತಿಯ ಎರಡು ಹಂತದ ಪ್ರಶಸ್ತಿಗಳಿಗೂ ಅರ್ಜಿ ಸಲ್ಲಿಸ ಬಯಸುವವರು ಪ್ರತಿ ಹಂತಕ್ಕೂ ಪ್ರತ್ಯೇಕವಾಗಿ ತಮ್ಮ ನಾಮ ನಿರ್ದೇಶನವನ್ನು ಸಲ್ಲಿಸತಕ್ಕದ್ದು. ಸರ್ವೋತ್ತಮ ಸೇವಾ ಪ್ರಶಸ್ತಿಗಾಗಿ ನಾಮ ನಿರ್ದೇಶನವನ್ನು ಸಲ್ಲಿಸ ಬಯಸುವವರು ಜಾಲತಾಣ ವಿಳಾಸ https://dparar.karnatak.gov.in ಅಥವಾ https://sarvothamaawards.karnatak.gov.in ಮೂಲಕ ಉಲ್ಲೇಖಿತ ಸರ್ಕಾರದ ಆದೇಶದಲ್ಲಿನ ನಿರ್ದೇಶನಗಳನ್ವಯ ರಾಜ್ಯ ಮತ್ತು ಜಿಲ್ಲಾ ಮಟ್ಟದ ಪ್ರಶಸ್ತಿಯ ನಾಮನಿರ್ದೇಶನಗಳನ್ನು ಕನ್ನಡ ಅಥವಾ ಇಂಗ್ಲೀಷ್ ನಲ್ಲಿ ಸಲ್ಲಿಸಬಹುದು.

ಕನ್ನಡದಲ್ಲಿ ಸಲ್ಲಿಸಲು ನುಡಿ 6.0 ಆವೃತ್ತಿಯನ್ನು ಮಾತ್ರ ಬಳಸುವಂತೆ ಸೂಚಿಸಿದೆ. ಅರ್ಜಿ ಸಲ್ಲಿಸಲು ಫೆಬ್ರವರಿ 25 ಕೊನೆಯ ದಿನಾಂಕವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾಧಿಕಾರಿಗಳ ಕಾರ್ಯಾಲಯಕ್ಕೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಜಿಲ್ಲಾ ಮಟ್ಟದ ರಾಷ್ಟ್ರೀಯ ಜಂತುಹುಳು ನಿವಾರಣಾ ದಿನಾಚರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ರಾಜ್ಯದಲ್ಲಿ "ರಾಷ್ಟ್ರೀಯ ಜಂತುಹುಳು ನಿವಾರಣಾ ದಿನಾಚರಣೆ" ಫೆಬ್ರವರಿ 10 ರಂದು ಹಾಗೂ ಮಾಪ್ ಅಪ್ ಡೇ ಯನ್ನು ಫೆಬ್ರವರಿ 16 ರಂದು ಆಚರಿಸಲಾಗುತ್ತಿದೆ. ಆ ಯೋಜನೆಯಡಿಯಲ್ಲಿ ಮಕ್ಕಳಿಗೆ ಅಲ್ಬೆಂಡಜೋಲ್ ಮಾತ್ರೆಗಳನ್ನು ನೀಡುವ ಮುಖಾಂತರ ಮಕ್ಕಳನ್ನು ಜಂತುಹುಳು ಮುಕ್ತರನ್ನಾಗಿಸಲಾಗುತ್ತದೆ. ಜಿಲ್ಲೆಯಲ್ಲಿ 1 ವರ್ಷದಿಂದ 19 ವರ್ಷದ ಮಕ್ಕಳ ಒಟ್ಟು ಗುರಿ 3,28,643 ಹೊಂದಿದ್ದು, ಎಲ್ಲಾ ಮಕ್ಕಳಿಗೆ ಅಲ್ಬೆಂಡಜೋಲ್ ಮಾತ್ರೆಗಳನ್ನು ನೀಡಲಾಗುತ್ತದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಫೆ.11ರಂದು ರೋಣದಲ್ಲಿ ಜನ ಸಂಪರ್ಕ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ಅಪರ ಪೊಲೀಸ್ ಮಹಾ ನಿರ್ದೇಶಕರು ಕರ್ನಾಟಕ ಲೋಕಾಯುಕ್ತ ಬೆಂಗಳೂರು ಅವರ ನಿರ್ದೇಶನದಂತೆ ಕರ್ನಾಟಕ ಲೋಕಾಯುಕ್ತ ಗದಗ ಕಚೇರಿಯ ಪೊಲೀಸ್ ಅಧಿಕಾರಿಗಳು ಫೆಬ್ರವರಿ 11 ಬುಧವಾರ ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 01.00 ಗಂಟೆಯವರೆಗೆ ರೋಣದ ತಹಸೀಲ್ದಾರ್ ಕಚೇರಿ ಸಭಾಭವನದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆ ಮತ್ತು ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ ಎಂದು ಪೊಲೀಸ್ ಉಪಾಧೀಕ್ಷಕ ವಿಜಯ ಬಿರಾದಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯಾವುದೇ ದುರ್ವ್ಯಸನಗಳಿಗೆ ಬಲಿಯಾಗಬೇಡಿ



■ ವಿಜಯಸಾಕ್ಷಿ ಸುದ್ದಿ, ಡಂಬಳ

ಭಾರತ ದೇಶದಲ್ಲಿ ಅಪಾರ ಯುವಕರ ಶಕ್ತಿ ಬಹಳ ಪ್ರಬಲವಾಗಿದೆ. ಆ ಯುವ ಶಕ್ತಿಯನ್ನು ಸಂರಕ್ಷಣೆ ಮಾಡುವುದು ಅವಶ್ಯಕವಾಗಿದೆ ಎಂದು ಡಂಬಳ-ಗದಗ ಜಗದ್ಗುರು ಡಾ. ತೋಂಟದಾರ್ಯ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ಡಂಬಳ ಗ್ರಾಮದ ಆರಾಧ್ಯ ದೇವರಾದ ಜಗದ್ಗುರು ತೋಂಟ-ದಾರ್ಯ ಮದರ್ಧನಾರೀಶ್ವರರ 286ನೇ ಜಾತ್ರಾ ಮಹೋತ್ಸವದ ನಿಮಿತ್ತ ಸಂಗ್ರಾಮ ಕಲ್ಲುಗಳು ಹಾಗೂ ಗುಂಡು ಎತ್ತುವ, ಮರಳು ತುಂಬಿದ ಹಿತ್ತಾಳೆ ಕೊಡವನ್ನು ಎತ್ತುವ ಸ್ಪರ್ಧೆಗಳಿಗೆ ಚಾಲನೆ ನೀಡಿ ಮಾತನಾಡಿದ ಶ್ರೀಗಳು, ಹಿರಿಯರು ಕಲ್ಲು ಎತ್ತುವ ಪ್ರದರ್ಶನದಲ್ಲಿ ವಿಶೇಷ ಆಸಕ್ತಿ ತೋರಿಸಿ, ಜಾತ್ರಾ ಮಹೋತ್ಸವದಲ್ಲಿ ಪ್ರೋತ್ಸಾಹಿಸುತ್ತಾ ಬಂದಿದ್ದಾರೆ. ಇಂತಹ ಕಸರತ್ತುಗಳಿಂದ ದೈಹಿಕ, ಮಾನಸಿಕ ಶಕ್ತಿ ಹೆಚ್ಚಾಗುವುದರ ಮೂಲಕ ಅವರ ಬದುಕನ್ನು ಉತ್ತಮವಾಗಿ ಕಟ್ಟಿಕೊಳ್ಳಬಹುದು ಎಂದರು.

ಇಂದಿನ ದಿನಗಳಲ್ಲಿ ಕೆಲ ಯುವಕರು ಬೇರೆ ಬೇರೆ ವ್ಯಸನಗಳಿಗೆ ಒಳಗಾಗಿ ತಮ್ಮ ಆರೋಗ್ಯ ಹಾಳು ಮಾಡಿಕೊಳ್ಳುತ್ತಿದ್ದಾರೆ. ಯಾವುದೇ ದುರ್ವ್ಯಸನಗಳಿಗೆ ಬಲಿಯಾಗಬೇಡಿ. ಇದರಿಂದ ನಿಮ್ಮ ಆರೋಗ್ಯ, ಆಯುಷ್ಯವನ್ನು ಕಳೆದುಕೊಳ್ಳುತ್ತೀರಿ. ಪೌಷ್ಟಿಕ ಆಹಾರಕ್ಕೆ ಆದ್ಯತೆ ನೀಡಬೇಕು. ಡಂಬಳ ಗ್ರಾಮ ಪ್ರಾಚೀನ ಐತಿಹಾಸಿಕ ಗ್ರಾಮವಾಗಿದ್ದು, ಇಲ್ಲಿ ಗ್ರಾಮೀಣ ಕ್ರೀಡೆಗಳಿಗೆ ಆದ್ಯತೆ ನೀಡುತ್ತಾ ಬರುತ್ತಿರುವುದು ಪ್ರಶಂಸನೀಯ ಎಂದರು.

ಮುತ್ತಪ್ಪ ಭೋವಿ ದೊಡ್ಡ ಗಾತ್ರದ ಮರಳು ತುಂಬಿದ ಹಿತ್ತಾಳಿ ಕೊಡವನ್ನು ಎತ್ತಿದರೆ, ಇನ್ನೂ ಕೆಲ ಯುವಕರು 65, 35, 30 ಕೆ.ಜಿ ತೂಕದ ಸಂಗ್ರಾಮ ಕಲ್ಲುಗಳನ್ನು ಎತ್ತುವುದರ ಮೂಲಕ ತಮ್ಮ ಶಕ್ತಿ ಪ್ರದರ್ಶಿಸಿ ಶಹಬ್ಬಾಸ್ ಎನಿಸಿಕೊಂಡರು.

ಈ ಸಂದರ್ಭದಲ್ಲಿ ಮರಿತೇಮಪ್ಪ ಆದಮ್ಮನವರ, ಮಲ್ಲಪ್ಪ ಮಠದ, ಜಿ.ವಿ. ಹಿರೇಮಠ, ಯುವ ಮುಖಂಡ ಶರಣು ಬಂಡಿಹಾಳ, ಮಳ್ಳಪ್ಪ ಮಠದ, ವಿರೂಪಾಕ್ಷಪ್ಪ ಲಕ್ಕುಂಡಿ, ಭೀಮಪ್ಪ ಗದಗಿನ, ಯಲ್ಲಪ್ಪ ದಂಡಿನ, ಯಂಕಣ್ಣ ಗಡಗಿ, ಮಂಜುನಾಥ ಸಂಜೀವಣ್ಣವರ, ಗೌಸಿದ್ದಪ್ಪ ಹಳ್ಳಾಕಾರ, ಗ್ರಾಮದ ಹಿರಿಯರು, ಯುವಕರು ಇದ್ದರು. ಆರ್.ಜಿ. ಕೊರ್ಲಹಳ್ಳಿ ನಿರೂಪಿಸಿ ವಂದಿಸಿದರು.

# ವಾಷಿಂಗ್ಟನ್ ಪೋಸ್ಟ್‌ನಲ್ಲಿ ಉದ್ಯೋಗ ಕಡಿತ : ಕೆಲಸ ಕಳೆದುಕೊಂಡ ಶಶಿ ತರೂರ್ ಮಗ

■ ವಿಜಯಸಾಕ್ಷಿ ಸುದ್ದಿ, ವಾಷಿಂಗ್ಟನ್

ಪ್ರಮುಖ ಮಾಧ್ಯಮ ಸಂಸ್ಥೆ ವಾಷಿಂಗ್ಟನ್ ಪೋಸ್ಟ್‌ನಲ್ಲಿ ಭಾರೀ ಉದ್ಯೋಗ ಕಡಿತ ನಡೆದಿರುವ ಬಗ್ಗೆ ವರದಿಯಾಗಿದೆ. ಈ ಕುರಿತು ಕೆಲಸ ಕಳೆದುಕೊಂಡಿರುವ ಹಿರಿಯ ಕಾಂಗ್ರೆಸ್ ನಾಯಕ ಹಾಗೂ ಸಂಸದ ಶಶಿ ತರೂರ್ ಅವರ ಮಗ ಇಶಾನ್ ತರೂರ್ ಮಾಹಿತಿ ಹಂಚಿಕೊಂಡಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಭಾವುಕವಾಗಿ ಬರೆದುಕೊಂಡಿರುವ ಇಶಾನ್ ತರೂರ್, ಪತ್ರಿಕೆಯ ಅಂತರಾಷ್ಟ್ರೀಯ ವಿಭಾಗದ ಬಹುತೇಕ ಸಿಬ್ಬಂದಿ ಹಾಗೂ ಅನೇಕ ಪ್ರತಿಭಾವಂತ ಸಹೋದ್ಯೋಗಿಗಳ ಜೊತೆಗೆ ತಾವೂ ಕೆಲಸ ಕಳೆದುಕೊಂಡಿರುವುದಕ್ಕೆ ತೀವ್ರ ಬೇಸರ ವ್ಯಕ್ತಪಡಿಸಿದ್ದಾರೆ. ಸುಮಾರು 12 ವರ್ಷಗಳ ಕಾಲ ತಮ್ಮೊಂದಿಗೆ ಕೆಲಸ ಮಾಡಿದ ಅಪ್ರತಿಮ ಪತ್ರಕರ್ತರು ಮತ್ತು ಸಂಪಾದಕರಿಂದ ದೂರವಾಗುತ್ತಿರುವುದು ಮನಸ್ಸಿಗೆ ನೋವುಂಟು ಮಾಡಿದೆ ಎಂದು ಅವರು ಹೇಳಿದ್ದಾರೆ.

# ನಾಳೆ ಕಾರ್ಯಾಗಾರ

■ ವಿಜಯಸಾಕ್ಷಿ ಸುದ್ದಿ, ಗದಗ

ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ, ಗದಗ ಹಾಗೂ ಕರ್ನಾಟಕ ಸ್ಟೇಟ್ ಮಾರ್ಕೆಟಿಂಗ್ ಕಮ್ಯುನಿಕೇಷನ್ ಮತ್ತು ಅಡ್ವರ್ಟೈಜಿಂಗ್ ಲಿ ಬೆಂಗಳೂರು ಇವರ ಸಂಯುಕ್ತ ಆಶ್ರಯದಲ್ಲಿ ರ್‍ಯಾಂಪ್ ಅಡಿ ZED & LEAN ವಿಷಯದ ಕುರಿತು ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಿಗಳಿಗೆ ಒಂದು ದಿನದ ಕಾರ್ಯಾಗಾರವನ್ನು ಫೆಬ್ರವರಿ 7 ರಂದು ಬೆಳಿಗ್ಗೆ 10 ಗಂಟೆಗೆ ಶ್ರೀಮತಿ ಕಮಾಲಾ ಮತ್ತು ಶ್ರೀ ವೆಂಕಪ್ಪ ಎಂ. ಅಗಡಿ ಕಾಲೇಜ ಆಫ್ ಇಂಜಿನಿಯರಿಂಗ್ & ಟೆಕ್ನಾಲಜಿ, ಲಕ್ಷ್ಮೇಶ್ವರದಲ್ಲಿ ಆಯೋಜಿಸಲಾಗಿದೆ.

ಲೀಡ್ ಬ್ಯಾಂಕ್ ವ್ಯವಸ್ಥಾಪಕ ಸಂತೋಷ ಎಂ.ವಿ, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಮಲ್ಲೂರ ಬಸವರಾಜ, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಪ್ರಶಾಂತ ಬಾರಿಗಿಡದ , ಎಂ.ಎಸ್.ಎಂ.ಇ ಡಿ ಎಫ್ ಓ ನಿವೃತ್ತ ಉಪನಿರ್ದೇಶಕ ಗೋಪಿನಾಥ ರಾವ್ ಉಪಸ್ಥಿತರಿರುವರು.

ಜಿಲ್ಲಾ ಕೈಗಾರಿಕಾ ಕೇಂದ್ರದ ಸಹಾಯಕ ನಿರ್ದೇಶಕ ( ಪ್ರಭಾರ) ಸೋಮಶೇಖರ ಪಾಟೀಲ ಸ್ವಾಗತ ಕೋರಿದ್ದಾರೆ.

# ಸಾಲಬಾಧೆಗೆ ಮನನೊಂದು ಆತ್ಮಹತ್ಯೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಕುಂದ್ರಳ್ಳಿ ಗ್ರಾಮದ ಬಸವರಾಜ ಶಿವಪ್ಪ ಮೇಟಿ (40) ಎಂಬ ರೈತ ಸಾಲಬಾಧೆಗೆ ಮನನೊಂದು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಜರುಗಿದೆ.

ಮೃತ ರೈತ ಬಸವರಾಜ ತನ್ನ ಸ್ವಂತ ಜಮೀನಿನ ಮೇಲೆ 5/6 ವರ್ಷಗಳ ಹಿಂದೆ ಬ್ಯಾಂಕಿನಲ್ಲಿ ಕೃಷಿ ಸಾಲ ಮಾಡಿಕೊಂಡಿದ್ದ.

ಅಲ್ಲದೇ ಜೀವನ ನಿರ್ವಹಣೆ, ಮಕ್ಕಳ ಶಿಕ್ಷಣಕ್ಕಾಗಿ ಅಲ್ಲಲ್ಲಿ ಕೈ ಸಾಲವನ್ನೂ ಮಾಡಿದ್ದ ಎನ್ನಲಾಗಿದೆ. ನಾಲ್ಕೈದು ವರ್ಷಗಳಿಂದ ಕೃಷಿಯಿಂದ ಲಾಭದ ಬದಲಾಗಿ ನಷ್ಟ ಅನುಭವಿಸಿದ್ದ. ಇದೀಗ ಸಾಲ ತೀರಿಸುವ ಜತೆಗೆ ಮಕ್ಕಳ ಶಿಕ್ಷಣ, ಕುಟುಂಬ ನಿರ್ವಹಣೆ ಮಾಡುವುದು ಹೇಗೆಂಬ ಚಿಂತೆಯಿಂದ ಮನನೊಂದು ಗುರುವಾರ ತಮ್ಮ ಹೊಲದಲ್ಲಿ ವಿಷ ಸೇವಿಸಿದ್ದಾನೆ. ಲಕ್ಷ್ಮೇಶ್ವರದ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿ ಚಿಕಿತ್ಸೆ ಫಲಿಸದೇ ರೈತ ಮೃತ ಪಟ್ಟಿದ್ದಾನೆ. ಈ ಕುರಿತು ಶಿರಹಟ್ಟಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

**ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ**
ಪಿನ್ ಕೋಡ್ ನಂ. 582101. ದೂರವಾಣಿ: 08372-278003.
ಇ-ಮೇಲ್: uda_gadag@hotmail.com

ಸಂ: ನಅಪ್ರಾಗಬೆ/ಭೂಬ/2025-26/1368 ದಿನಾಂಕ: 05-02-2026

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ **ಶ್ರೀ ಆನಂದ ಬಾಬಾಸಾ ಭಾಂಡಗೆ ಹಾಗೂ ಇತರರು** ಸಾ॥ ಗದಗ ಈ ಕೆಳಕಂಡ ಜಮೀನನ್ನು ಭೂ-ಉಪಯೋಗ ಬದಲಾವಣೆ ಮಾಡಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ-ಉಪಯೋಗ ಬದಲಾವಣೆಯಿಂದ ಸ್ಥಳದಲ್ಲಿ ವಸತಿ ನಿವೇಶನಗಳನ್ನು ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ಅರ್ಜಿದಾರರಿಗೆ ಹಾಗೂ ಸಾರ್ವಜನಿಕರಿಗೆ ವಸತಿ ನಿವೇಶನಗಳು ಸಿಗುತ್ತವೆ. ಇದರಿಂದ ನಗರದಲ್ಲಿ ವಸತಿ ಸಮಸ್ಯೆ ಸ್ವಲ್ಪ ಬಗೆ ಹರಿಯುತ್ತದೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ **ಕಾಯ್ದೆ 1961 ರ ಕಲಂ 14(ಎ)**ರಂತೆ ಭೂ-ಉಪಯೋಗ ಬದಲಾವಣೆ ಮಾಡುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ **15 (ಹದಿನೈದು)** ದಿನಗಳೊಳಗಾಗಿ ಆಯುಕ್ತರು, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ-582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ.ನ. | ಗ್ರಾಮ | ರಿ.ಸ.ನಂ. | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂ-ಉಪಯೋಗ | ಅರ್ಜಿದಾರರು ಬಯಸಿರುವ ಭೂ-ಉಪಯೋಗ ಬದಲಾವಣೆ |
|---|---|---|---|---|---|
| 01 | ಗದಗ | 236/*/3 | 02ಎಕರೆ-00ಗುಂಟೆ | ಕೃಷಿ | ವಸತಿ |

ವಾ.ಸಾ.ಇ./ಗದಗ/627/ ದೇಶಪಾಂಡೆಪಬ್ಲಿಸಿಟಿ/2025-26

ಸಹಿ/- ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ, ಗದಗ-ಬೆಟಗೇರಿ

**ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ**
ಪಿನ್ ಕೋಡ್ ನಂ. 582101. ದೂರವಾಣಿ: 08372-278003.
ಇ-ಮೇಲ್: uda_gadag@hotmail.com

ಸಂ: ನಅಪ್ರಾಗಬೆ/ಭೂಬ/2025-26/1366 ದಿನಾಂಕ: 05.02.2026

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ **ಶ್ರೀ ಅಮೃತ ಶಂಕರಸಾ ಪಟ್ಟಣ ಹಾಗೂ ಇತರರು ಸಾ॥ ಗದಗ** ಈ ಕೆಳಕಂಡ ಜಮೀನನ್ನು ಭೂ ಉಪಯೋಗ ಬದಲಾವಣೆ ಮಾಡಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ ಉಪಯೋಗ ಬದಲಾವಣೆಯಿಂದ ಸ್ಥಳದಲ್ಲಿ ವಾಣಿಜ್ಯ ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ವಾಣಿಜ್ಯ ಚಟುವಟಿಕೆಗಳನ್ನು ನಡೆಸಲು ಹಾಗೂ ಹಲವರಿಗೆ ಉದ್ಯೋಗ ದೊರಕುತ್ತವೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ **ಯೋಜನಾ ಕಾಯ್ದೆ 1961 ರ ಕಲಂ 14(ಎ) ರಂತೆ** ಭೂ ಉಪಯೋಗ ಬದಲಾವಣೆ ಮಾಡುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ **15 (ಹದಿನೈದು)** ದಿನಗಳೊಳಗಾಗಿ ಆಯುಕ್ತರು, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ-582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ.ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗದಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂ ಉಪಯೋಗ ಬದಲಾವಣೆ |
|---|---|---|---|---|---|
| 01 | ಗದಗ | 267/*/11 | 02ಎಕರೆ-22ಗುಂಟೆ -01ಆಣೆ ಪೈಕಿ 01ಎಕರೆ-17ಗುಂಟೆ | ವಸತಿ | ವಾಣಿಜ್ಯ(ಮಳಿಗೆ) |

ವಾ.ಸಾ.ಇ/ಗದಗ/630/ ದೇಶಪಾಂಡೆಪಬ್ಲಿಸಿಟಿ/2025-26

ಸಹಿ/- ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ, ಗದಗ-ಬೆಟಗೇರಿ

**ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ**
ಪಿನ್ ಕೋಡ್ ನಂ. 582101. ದೂರವಾಣಿ: 08372-278003.
ಇ-ಮೇಲ್: uda_gadag@hotmail.com

ಸಂ: ನಅಪ್ರಾಗಬೆ/ಭೂಬ/2025-26/1352 ದಿನಾಂಕ: 05.02.2026

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ **ಶ್ರೀಮತಿ ನೀಲವ್ವ ಕೋಂ ಸೋಮಪ್ಪ ಮಣ್ಣೂರ ಹಾಗೂ ಇತರರು** ಸಾ॥ ಗದಗ ಈ ಕೆಳಕಂಡ ಜಮೀನನ್ನು ಭೂ ಉಪಯೋಗ ಬದಲಾವಣೆ ಮಾಡಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ ಉಪಯೋಗ ಬದಲಾವಣೆಯಿಂದ ಸ್ಥಳದಲ್ಲಿ ವಸತಿ ನಿವೇಶನಗಳನ್ನು ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ಅರ್ಜಿದಾರರಿಗೆ ಹಾಗೂ ಸಾರ್ವಜನಿಕರಿಗೆ ವಸತಿ ನಿವೇಶನಗಳು ಸಿಗುತ್ತವೆ. ಇದರಿಂದ ನಗರದಲ್ಲಿ ವಸತಿ ಸಮಸ್ಯೆ ಸ್ವಲ್ಪ ಬಗೆಹರಿಯುತ್ತದೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ **ಯೋಜನಾ ಕಾಯ್ದೆ 1961 ರ ಕಲಂ 14(ಎ)** ರಂತೆ ಭೂ ಉಪಯೋಗ ಬದಲಾವಣೆ ಮಾಡುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ **15 (ಹದಿನೈದು)** ದಿನಗಳೊಳಗಾಗಿ ಆಯುಕ್ತರು, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ-582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ.ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗದಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂ ಉಪಯೋಗ ಬದಲಾವಣೆ |
|---|---|---|---|---|---|
| 01 | ನರಸಾಪೂರ | 14/*/2ಬ | 02ಎಕರೆ-33ಗುಂಟೆ ಪೈಕಿ 00ಎ-02ಗುಂಟೆ 'ಅ' ಖರಾಬು ಹೊರತುಪಡಿಸಿ ಉಳಿದ ಕ್ಷೇತ್ರ: 02ಎಕರೆ-31ಗುಂಟೆ | ಕೃಷಿ | ವಸತಿ |

ವಾ.ಸಾ.ಇ/ಗದಗ/621/ ದೇಶಪಾಂಡೆಪಬ್ಲಿಸಿಟಿ/2025-26

ಸಹಿ/- ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ, ಗದಗ-ಬೆಟಗೇರಿ

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka